ಸಂಪುಟ : 9 ಸಂಚಿಕೆ 78 ಪುಟ : 4 ಬೆಲೆ: 3.00 ಶುಕ್ರವಾರ ಏಪ್ರಿಲ್ 26 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 78 Pages : 4 Price : 3.00 Friday April 26 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಬಹಿರಂಗ ಪ್ರಚಾರ ಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ವಾಗ್ದಾಳಿ

# ಮೋದಿಗೆ ಕರ್ನಾಟಕದ ಜನರ ಮತ ಕೇಳುವ ನೈತಿಕತೆ ಇಲ್ಲ

**■ ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯದ 223 ತಾಲೂಕುಗಳು ಬರದಿಂದ ತತ್ತರಿಸಿವೆ. ಬರ ಪರಿಹಾರ ಕೊಡುವಂತೆ 2023ರ ಸೆಪ್ಟೆಂಬರ್‌ನಲ್ಲಿ ಸರಕಾರ ಮನವಿ ಮಾಡಿತ್ತು. ಅಕ್ಟೋಬರ್ 4ರಿಂದ 9ರವರೆಗೆ ಕೇಂದ್ರ ತಂಡ ಅಧ್ಯಯನ ನಡೆಸಿ, ವರದಿ ನೀಡಿದರೂ ಪ್ರಧಾನಿ ಮೋದಿ ಪರಿಹಾರ ಕೊಡಲಿಲ್ಲ. ಅಷ್ಟೇ ಅಲ್ಲದೆ, 2019ರಲ್ಲಿ ಭೀಕರ ಪ್ರವಾಹ ಬಂದಾಗ ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದರೂ ಆಗಲೂ ಕರ್ನಾಟಕದ ಮುಖ ನೋಡದ ಪ್ರಧಾನಿ ಮೋದಿ ಈಗ ಚುನಾವಣೆ ಪ್ರಚಾರಕ್ಕೆ ಪದೇ ಪದೇ ಕರ್ನಾಟಕ್ಕೆ ಬರುತ್ತಿದ್ದಾರೆ. ಅವರಿಗೆ ಕರ್ನಾಟಕದ ಜನರ ಮತ ಕೇಳುವ ನೈತಿಕತೆ ಇಲ್ಲ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದರು.

ಜಿಲ್ಲೆಯ ಗಜೇಂದ್ರಗಡದ ಎಪಿಎಂಸಿ ಮೈದಾನದಲ್ಲಿ ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಬಹಿರಂಗ ಪ್ರಚಾರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬರ ಪರಿಹಾರ ಕೋರಿ ನಾವು ಸುಪ್ರೀಂಕೋರ್ಟ್ ಮೊರೆ ಹೋಗದಿದ್ದಲ್ಲಿ ಕೇಂದ್ರ ಸರಕಾರ ಕರ್ನಾಟಕದತ್ತ ತಿರುಗಿಯೂ ನೋಡುತ್ತಿರಲಿಲ್ಲ ಎಂದು ಹೇಳಿದರು.

ಸುಪ್ರಿಂಕೋರ್ಟ್ ಮೊರೆ ಹೋಗಿದ್ದರಿಂದಲೇ ಇವತ್ತು ಕೇಂದ್ರದಿಂದ ಬರ ಪರಿಹಾರ ಲಭ್ಯವಾಗುವ ಭರವಸೆ ಮೂಡಿದೆ.



ಕೇಂದ್ರ ಸರಕಾರದ ಪರ ವಕೀಲರು ಕೇಳಿದ್ದ ಕಾಲಾವಕಾಶ ಮುಗಿಯುತ್ತಾ ಬಂದಿದ್ದು, ಅನುದಾನ ಬರುವ ನಿರೀಕ್ಷೆಯಿದೆ. ಆದರೆ ಈವರೆಗೂ ಹಣ ಬಂದಿಲ್ಲ ಎಂದು ಸಿಎಂ ಸಿದ್ದರಾಮಯ್ಯ ಹೇಳಿದರು.

ಬರ ಪರಿಹಾರ ಮತ್ತು ಕೇಂದ್ರ ಸರಕಾರದ ಮಲತಾಯಿ ಧೋರಣೆ ವಿರುದ್ಧ ಕರ್ನಾಟಕದ 25 ಜನ ಬಿಜೆಪಿ ಸಂಸದರಿದ್ದರೂ ಸಂಸತ್‌ನಲ್ಲಿ ಕರ್ನಾಟಕಕ್ಕೆ ಆಗಿರುವ ಅನ್ಯಾಯದ ಬಗ್ಗೆ ಮಾತಾಡಲಿಲ್ಲ. ಕರ್ನಾಟಕವನ್ನು ಕಡೆಗಣಿಸಿದ ಬಿಜೆಪಿ ಮತ ಹಾಕಬೇಡಿ ಎಂದು ಸಿದ್ದರಾಮಯ್ಯ ವಿನಂತಿಸಿದರು.

ಮಹದಾಯಿ ಯೋಜನೆ ಜಾರಿಗಾಗಿ ರಕ್ತದಲ್ಲಿ ಪತ್ರ ಬರೆದ ಬಸವರಾಜ ಬೊಮ್ಮಾಯಿ, ಎರಡೂವರೆ ವರ್ಷ ಅಧಿಕಾರದಲ್ಲಿದ್ದರೂ ಮಹದಾಯಿ ಯೋಜನೆಯನ್ನು ಜಾರಿ ಮಾಡಲಿಲ್ಲ. ಸದ್ಯ ಕೇಂದ್ರ ಸರಕಾರ ಪರಿಸರ ಇಲಾಖೆ ಸದರಿ ಯೋಜನೆ ಜಾರಿಗೆ ತಡೆ ನೀಡಿದೆ.

ರಾಜ್ಯ ಬಿಜೆಪಿ ನಾಯಕರು ವ'ು ತ'ು ▸▸3ನೇ ಪುಟಕ್ಕೆ

> ನರೇಂದ್ರ ಮೋದಿ ಕಳೆದ 10 ವರ್ಷದಿಂದ ಅಧಿಕಾರದಲ್ಲಿದ್ದಾರೆ. ಆದರೂ ಈವರೆಗೆ ಜನಸಾಮಾನ್ಯರ ಖಾತೆಗೆ 15 ಲಕ್ಷ ರೂಪಾಯಿ ಹಾಕಿಲ್ಲ. ವಾರ್ಷಿಕ 2 ಕೋಟಿ ಉದ್ಯೋಗ ಸೃಷ್ಟಿಯ ಭರವಸೆ ಈಡೇರಿಸಿಲ್ಲ. ರೈತರ ಆದಾಯ ದುಪ್ಪಟ್ಟು ಮಾಡುವ ಭರವಸೆ ನೀಡಿದರು, ಆದರೆ ರೈತರ ಖರ್ಚು ದುಪ್ಪಟ್ಟುಗೊಳಿಸಿದರು. ಅಗತ್ಯ ವಸ್ತುಗಳ ಬೆಲೆ ಏರಿಕೆ ನಿಯಂತ್ರಿಸಲಿಲ್ಲ. ಇಂಥ ಸುಳ್ಳು ಹೇಳುವ ಪಕ್ಷಕ್ಕೆ ಜನ ಮತ ಹಾಕಬಾರದು ಎಂದು ಸಿಎಂ ಸಿದ್ದರಾಮಯ್ಯ ವಿನಂತಿಸಿದರು.



## ವೀಕ್ಷಕರ, ಮಾರ್ಗಾಧಿಕಾರಿಗಳ ನೇಮಕ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಏಪ್ರಿಲ್ 29ರಿಂದ ಮೇ 16ರವರೆಗೆ ಬೆಳಿಗ್ಗೆ 10.15 ಗಂಟೆಯಿಂದ ಸಂಜೆ 5.30ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–2ನ್ನು ನಡೆಸಲಿದೆ. ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ ವೀಕ್ಷಕರ, ಮಾರ್ಗಾಧಿಕಾರಿಗಳ ಹಾಗೂ ತ್ರಿಸದಸ್ಯ ಸಮಿತಿ ನೇಮಕ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.




ಲಕ್ಷ್ಮೇಶ್ವರ ತಾಲೂಕಿನ ರಾಮಗೇರಿ ಗ್ರಾಮದ ಚೆಕ್‌ಪೋಸ್ಟ್‌ನಲ್ಲಿ ಗುರುವಾರ ಬೈಕ್‌ನಲ್ಲಿ ದಾಖಲೆ ಇಲ್ಲದೇ ಸಾಗಿಸುತ್ತಿದ್ದ 2,77,270 ರೂ ನಗದನ್ನು ತಹಸೀಲ್ದಾರ ವಾಸುದೇವ ಸ್ವಾಮಿ ನೇತೃತ್ವದಲ್ಲಿ ವಶಪಡಿಸಿಕೊಳ್ಳಲಾಗಿದೆ. ಈ ವೇಳೆ ಸಿಬ್ಬಂದಿಗಳಾದ ಗುರುರಾಜ ಹವಳದ, ಎಸ್.ಬಿ. ಲಮಾಣಿ ಸೇರಿ ಪೊಲೀಸ್ ಸಿಬ್ಬಂದಿಗಳು ಇದ್ದರು.

### ಏಪ್ರಿಲ್ 29ರಿಂದ ಮೇ 16ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ–2

# ಪರೀಕ್ಷಾ ಕೇಂದ್ರಗಳ ಸುತ್ತ ಪ್ರತಿಬಂಧಕಾಜ್ಞೆ ಜಾರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು 2024ರ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ ನಡೆಸಲಿರುವ ದ್ವಿತೀಯ ಪಿಯುಸಿ ಪರೀಕ್ಷೆ–2 ಪರೀಕ್ಷೆಗಳನ್ನು ಏಪ್ರಿಲ್ 29ರಿಂದ ಮೇ 16ರವರೆಗೆ ಬೆಳಿಗ್ಗೆ 10.15 ಗಂಟೆಯಿಂದ ಸಂಜೆ 5.30ರವರೆಗೆ ನಡೆಸಲಿದೆ.

ಪರೀಕ್ಷಾ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಜಿಲ್ಲೆಯ 8 ಪರೀಕ್ಷಾ ಕೇಂದ್ರಗಳಲ್ಲಿ ಏಪ್ರಿಲ್ 29ರಿಂದ ಮೇ 16ರವರೆಗೆ ಬೆಳಿಗ್ಗೆ 9 ಗಂಟೆಯಿಂದ ಮಧ್ಯಾಹ್ನ 2.30 ಗಂಟೆಯವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು, ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝೆರಾಕ್ಸ್ ಅಂಗಡಿ, ಬುಕ್ ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್



ಮಾಡಲು ಆದೇಶಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳು ಆಗಮಿಸುವ ಸಮಯ ಮತ್ತು ಹೊರ ಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ, ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿ ವೈಶಾಲಿ ಎಂ.ಎಲ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

#### ಪರೀಕ್ಷಾ ಕೇಂದ್ರಗಳ ವಿವರ

ನಗರದ ಜ.ತೋಂಟದಾರ್ಯ ಪದವಿಪೂರ್ವ ಕಾಲೇಜು, ಹೆಚ್‌ಸಿಇಎಸ್ ಪದವಿಪೂರ್ವ ಕಾಲೇಜು, ಶಿರಹಟ್ಟಿಯ ಸರ್ಕಾರಿ ಪದವಿಪೂರ್ವ ಕಾಲೇಜು, ನರಗುಂದದ ಸರ್ಕಾರಿ ಪದವಿಪೂರ್ವ ಕಾಲೇಜು, ಮುಂಡರಗಿಯ ಜೆ.ಎ. ಪದವಿಪೂರ್ವ ಕಾಲೇಜು, ರೋಣದ ವೀರರಾಣಿ ಚನ್ನಮ್ಮ ಪದವಿಪೂರ್ವ ಕಾಲೇಜು, ಲಕ್ಷ್ಮೇಶ್ವರ ಸರ್ಕಾರಿ ಪದವಿಪೂರ್ವ ಕಾಲೇಜು, ಗಜೇಂದ್ರಗಡ ಸರ್ಕಾರಿ ಪದವಿಪೂರ್ವ ಕಾಲೇಜುಗಳಲ್ಲಿ ಪರೀಕ್ಷೆ ನಡೆಯಲಿದೆ.


## ಹಾಸ್ಯಾಸ್ಪದವಾಗಿರುವ ಬಿಜೆಪಿ ಸುಳ್ಳುಗಳು : ಎಚ್.ಕೆ.ಪಾಟೀಲ ಆರೋಪ

**■ ವಿಜಯಸಾಕ್ಷಿ ಸುದ್ದಿ, ಗದಗ**

ಬಿಜೆಪಿ ನೇತೃತ್ವದ ಕೇಂದ್ರ ಸರಕಾರ ಪದೇ ಪದೇ ಸುಳ್ಳು ಹೇಳುವ ಮೂಲಕ ಸಾಮಾನ್ಯ ಜನರು, ಮುಗ್ಧರು, ಯುವಕ–ಯುವತಿಯರು, ಮಧ್ಯಮ ವರ್ಗದವರು, ಬಡವರನ್ನು ಯಾಮಾರಿಸಲು ಯತ್ನಿಸುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಆರೋಪಿಸಿದರು.

ನಗರದ ಜಿಲ್ಲಾ ವಕೀಲರ ಸಂಘದಲ್ಲಿ ನಡೆದ ಸಭೆಯಲ್ಲಿ ಹಾವೇರಿ–ಗದಗ ಲೋಕಸಭೆ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಮತಯಾಚಿಸಿ ಅವರು ಮಾತನಾಡಿದರು.

ಪ್ರಜ್ಞಾವಂತ ಮತದಾರರು ಒಂದಷ್ಟು ಪ್ರಮುಖ ಅಂಶಗಳನ್ನು ಗಮನಿಸಿ ಮತ ನೀಡಬೇಕೆಂದು ಮನವಿ ಮಾಡಿದರು. 2014ರ ವರೆಗೆ ಕೇವಲ 65 ಲಕ್ಷ ಕೋಟಿ ರೂ. ಗಳಷ್ಟಿದ್ದ ಭಾರತದ ಸಾಲ ಬಿಜೆಪಿ ಸರಕಾರದ 10 ವರ್ಷಗಳ ಅವಧಿಯಲ್ಲಿ ಬರೋಬ್ಬರಿ 205 ಲಕ್ಷ ಕೋಟಿ ರೂ. ದಾಟಿದೆ. ಸಾಲ ವ್ಯಾಪಕ ಪ್ರಮಾಣದಲ್ಲಿ ಹೆಚ್ಚುತ್ತಿದೆ. ಆದರೆ ಬಿಜೆಪಿ ಮಾತ್ರ ದೇಶದ ಆರ್ಥಿಕತೆ ಹೆಚ್ಚಿಸಲು ಶ್ರಮ



ವಹಿಸಿದ್ದಾಗಿ ಹೇಳಿಕೊಳ್ಳುತ್ತಿರುವುದು ಹಾಸ್ಯಾಸ್ಪದವಾಗಿದೆ.

ನಮ್ಮ ರಾಜ್ಯದಿಂದ ಕೇಂದ್ರಕ್ಕೆ ಸಂದಾಯವಾಗುವ ಪ್ರತಿ 100ರೂ. ಟ್ಯಾಕ್ಸ್‌ಗೆ ಪ್ರತಿಯಾಗಿ ನಮಗೆ ಕೇವಲ 13 ರೂ. ಮಾತ್ರ ವಾಪಸ್ ಸಿಗುತ್ತಿದೆ. ಕನ್ನಡಿಗರು, ಕರ್ನಾಟಕದ ಬಗ್ಗೆ ಕೇಂದ್ರ ಸರ್ಕಾರ ಮಲತಾಯಿ ಧೋರಣೆ ತಳೆದಿದೆ. ಈ ತಾರತಮ್ಯ ಪ್ರಶ್ನಿಸಿ ಚರ್ಚೆಗೆ ಆಹ್ವಾನಿಸಿದರೂ ಬಿಜೆಪಿ ನಾಯಕರು ಬಾರದೇ ಪಲಾಯನ ಮಾಡುತ್ತಿದ್ದಾರೆ. ರಾಜ್ಯಕ್ಕೆ 18 ಸಾವಿರ ಕೋಟಿಗೂ ಅಧಿಕ ಬರ ಪರಿಹಾರ ಬಿಡುಗಡೆಯಾಗಬೇಕಿದ್ದು, ಪರಿಹಾರ ಬಿಡುಗಡೆಗಾಗಿ ಕಾಂಗ್ರೆಸ್ ಸುಪ್ರೀಂ ಕೋರ್ಟ್ ನವರೆಗೆ ಹೋರಾಟ ನಡೆಸಿದ್ದು, ಈ ವಿಷಯದಲ್ಲಿಯೂ ಕೇಂದ್ರ ಬಿಜೆಪಿ ಸರಕಾರ ತೀವ್ರ ಮುಖಭಂಗ ಅನುಭವಿಸಿದೆ. ಇಂಥ ಸಂದರ್ಭದಲ್ಲಿ ಅದ್ಯಾವ ಮುಖ ಹೊತ್ತು ಕೇಂದ್ರದ ಬಿಜೆಪಿ ನಾಯಕರು ರಾಜ್ಯಕ್ಕೆ ಮತಯಾಚಿಸಲು ಆಗಮಿಸುತ್ತಿದ್ದಾರೆ ಅರ್ಥವಾಗುತ್ತಿಲ್ಲ ಎಂದು ಸಚಿವ ಪಾಟೀಲ ವಾಗ್ದಾಳಿ ನಡೆಸಿದರು.

ಪ್ರತಿಯೊಬ್ಬರೂ ಜಾಗೃತರಾಗಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಿ, ಅತ್ಯಂತ ಸಜ್ಜನ ವ್ಯಕ್ತಿತ್ವದ ಆನಂದಸ್ವಾಮಿ ಗಡ್ಡದೇವರಮಠರಿಗೆ ಮತ ನೀಡುವ ಮೂಲಕ ಜನಪರ ಕಾಂಗ್ರೆಸ್ ಸರಕಾರವನ್ನು ಬೆಂಬಲಿಸಿ ಎಂದು ಮನವಿ ಮಾಡಿದರು.

ಸಭೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಕಾಂಗ್ರೆಸ್ ಮುಖಂಡರು, ಜಿಲ್ಲಾ ವಕೀಲರ ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಹಲವು ಗಣ್ಯರು ಉಪಸ್ಥಿತರಿದ್ದರು.

> ರಾಜ್ಯಕ್ಕೆ ಬರ ಪರಿಹಾರ ಬಿಡುಗಡೆ ಹಾಗೂ ನ್ಯಾಯಸಮ್ಮತ ಅನುದಾನ ಬಿಡುಗಡೆ ಮಾಡುವಲ್ಲಿ ಬಿಜೆಪಿ ತಾರತಮ್ಯ ಮಾಡುತ್ತಿರುವ ಸಂಗತಿ ಈಗ ರಾಜ್ಯದ ಜನತೆಗೆ ಗೊತ್ತಾಗಿದೆ. ರಾಜ್ಯಕ್ಕೆ ಬಿಜೆಪಿ ಮಾಡುತ್ತಿರುವ ಅನ್ಯಾಯವನ್ನು ಪ್ರಶ್ನಿಸಿ, ಪ್ರತಿಭಟಿಸಬೇಕಿದೆ. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿಗೆ ಸೋಲಿನ ರುಚಿ ತೋರಿಸಬೇಕಿದೆ.
>
> –ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವರು, ಗದಗ

## ಅರಿವು ಮೂಡಿಸಿದ ಬೀದಿ ನಾಟಕ

**■ ವಿಜಯಸಾಕ್ಷಿ ಸುದ್ದಿ, ಗದಗ**

ನೈತಿಕ ಚುನಾವಣೆ ಮತ್ತು ನೈತಿಕ ಮತದಾನದ ಅರಿವು ಮೂಡಿಸಿದ ಬೀದಿ ನಾಟಕ ಎಂದು ಜಿ.ಪಂ.ಸಿಇಒ ಎಸ್ ಭರತ್ ಹೇಳಿದರು.

ನಗರದ ಗಾಂಧಿ ವೃತ್ತದಲ್ಲಿ ಗುರುವಾರ ಕೆ.ಎಲ್.ಇ.ಸೊಸೈಟಿಯ ಸಿ.ಬಿ.ಎಸ್.ಸಿ.ಶಾಲೆಯ ಮಕ್ಕಳಿಂದ ಮತದಾನ ಜಾಗೃತಿ ಕುರಿತು ಬೀದಿ ನಾಟಕವನ್ನು ವೀಕ್ಷಿಸಿ ಮಾತನಾಡಿ ಅವರು, ಯಾವುದೇ ಆಸೆ ಅಮಿಷಕ್ಕೆ ಒಳಗಾಗದೆ ಮೇ7 ರಂದು ಅರ್ಹರೆಲ್ಲರೂ ಕಡ್ಡಾಯವಾಗಿ ಮತದಾನ ಮಾಡಿ




ಎಂದು ಹೇಳಿದರು.

ಭವಿಷ್ಯದ ಮತದಾರರಾದ ಮಕ್ಕಳು ಈಗಿನ ಮತದಾರರಿಗೆ ಬೀದಿ ನಾಟಕದ ಮೂಲಕ ನೀಡಿದ ಸಂದೇಶವನ್ನು ಜಾಗೂರುಕತೆಯಿಂದ ತೆಗೆದು–ಕೊಂಡು ಎಲ್ಲರ ಸಹಕಾರದೊಂದಿಗೆ ಗದಗ ಜಲ್ಲೆಯ ವ್ಯಾಪ್ತಿಯಲ್ಲಿ ಶೇಕಡಾ 100ರಷ್ಟು ಮತದಾನ ಮಾಡೋಣ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಇಒ ಮಾಣೀಕ್ ರಾವ್ ಪಾಟೀಲ್, ಕೆ.ಎಲ್.ಇ.ಪ್ರಾಂಶುಪಾಲರು, ಸಿಬ್ಬಂದಿ, ವಿದ್ಯಾರ್ಥಿಗಳು, ಪೋಷಕರು ಇದ್ದರು.

## ಮತದಾನ ಮಹತ್ವ ಕುರಿತು ಜಾಗೃತಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗ'ದ'ಗ'–ಬ'ಟ'ಗ'ೀ'ರಿ ನಗರಸಭೆ ವ್ಯಾಪ್ತಿಯಲ್ಲಿ ಕಡಿಮೆ ಮತದಾನವಾಗಿರುವ ಬೆಟಗೇರಿ ಬಳಿಯ ಮಂಜುನಾಥ ನಗರಕ್ಕೆ ಜಿ.ಪಂ ಉಪ ಕಾರ್ಯದರ್ಶಿ ಹಾಗೂ ಸ್ವೀಪ್ ಸಮಿತಿ ಜಿಲ್ಲಾ ನೋಡಲ್ ಅಧಿಕಾರಿ ಸಿ.ಬಿ. ದೇವರಮನಿ ಗುರುವಾರ ಭೇಟಿ ನೀಡಿ ಮತದಾನ ಮಹತ್ವ ಕುರಿತು ಜಾಗೃತಿ ಮೂಡಿಸಿದರು.

ಮಂಜುನಾಥ ನಗರದ ಮನೆ ಮನೆಗೆ ಭೇಟಿ ನೀಡಿ ಲೋಕಸಭಾ ಚುನಾವಣೆ ಸಂಬಂಧ ಮೇ 7ರಂದು ಮತದಾನ ನಡೆಯಲಿದ್ದು, ತಪ್ಪದೇ ಮತ ಚಲಾಯಿಸುವಂತೆ ಮತದಾರರಲ್ಲಿ ಕೋರಿದರು. ಯಾವುದೇ



ಕಾರಣಕ್ಕೂ ಮತದಾನದಿಂದ ಅರ್ಹರು ವಂಚಿತರಾಗಬಾರದು. ಕಡ್ಡಾಯವಾಗಿ ಮತದಾನ ಮಾಡಿ, ಮತದಾನ ಹೆಚ್ಚಳಕ್ಕೆ ಸಹಕರಿಸಬೇಕು ಎಂದು ಸಿ.ಬಿ. ದೇವರಮನಿ ಮನವಿ ಮಾಡಿದರು.

ಮನೆ ಮನೆಗೆ ಸ್ಟಿಕರ್ ಅಂಟಿಸುವ ಮೂಲಕ ಮೇ 7ರಂದು ಮತ ಚಲಾಯಿಸುವಂತೆ ಹಿರಿಯ ನಾಗರಿಕರಲ್ಲಿ ಕೋರಿದರಲ್ಲದೆ, ಪ್ರತಿ ಬಡಾವಣೆಗೂ ಬ್ಯಾನರ್ ಅಳವಡಿಸುವ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಲಾಗುವುದು. ಆ ನಿಟ್ಟಿನಲ್ಲಿ ಜಿಲ್ಲಾ ಸ್ವೀಪ್ ಸಮಿತಿ, ನಗರಸಭೆ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಗಳ ಮೂಲಕ ಹೆಚ್ಚಿನ ಅರಿವು ಮೂಡಿಸಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ಇದೇ ಏಪ್ರಿಲ್ 28ರಂದು ನಡೆಯುವ 'ನಮ್ಮ ನಡೆ–ಮತಗಟ್ಟೆ ಕಡೆಗೆ' ಸಂಬಂಧ ಜಾಗೃತಿ ಅಭಯಾನ ಹಮ್ಮಿಕೊಳ್ಳುವ ನಿಟ್ಟಿನಲ್ಲಿ ನಗರದ ಬಸವೇಶ್ವರ ವೃತ್ತಕ್ಕೆ ತೆರಳಿ ವೀಕ್ಷಿಸಲಾಯಿತು. ಜಾಥಾ ಮಾರ್ಗ ವೀರನಾರಾಯಣ ದೇವಸ್ಥಾನದ ಬಳಿಯ ಹೆಣ್ಣು ಮಕ್ಕಳ ಶಾಲೆಯಲ್ಲಿ ಮುಖ್ಯಾಪಾಧ್ಯಾಯರ ಜೊತೆಗೆ ಕಾರ್ಯಕ್ರಮ ಆಯೋಜಿಸುವ ಬಗ್ಗೆ ಚರ್ಚಿಸಲಾಯಿತು.

## ಮನೆ ಮತದಾನ ಕಾರ್ಯ ಏ.26ರಿಂದ

**■ ವಿಜಯಸಾಕ್ಷಿ ಸುದ್ದಿ, ಗದಗ**

ಲೋಕಸಭಾ ಚುನಾವಣೆ ಸಂಬಂಧ ಗದಗ ಜಿಲ್ಲೆಯಲ್ಲಿ 85 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕ ಮತದಾರರು ಹಾಗೂ ವಿಶೇಷಚೇತನ ಮತದಾರರ ಪೈಕಿ 12ಡಿ ಮುಖಾಂತರ ಅರ್ಜಿ ಸಲ್ಲಿಸಿ ಮನೆಯಲ್ಲಿಯೇ ಮತದಾನ ಮಾಡಲು ಆಯ್ಕೆ ಮಾಡಿದ ಮತದಾರರಿಗೆ ಏಪ್ರಿಲ್ 26ರಿಂದ 28ರವರೆಗೆ ಮನೆ ಮನೆಗೆ ತೆರಳಿ ಮತದಾನ ಕಾರ್ಯ ಕೈಗೊಳ್ಳಲಿದ್ದಾರೆ.

ಆದ್ದರಿಂದ ಈಗಾಗಲೇ ಅರ್ಜಿ ಸಲ್ಲಿಸಿರುವ ಮತದಾರರು, ಈ ದಿನಗಳಲ್ಲಿ ತಾವು ನೀಡಿದ ವಿಳಾಸದ ಮನೆಯಲ್ಲಿಯೇ ಹಾಜರಿದ್ದು, ಮತ ಚಲಾಯಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಕೋರಿದ್ದಾರೆ.

## ಸಂಪಾದಕೀಯ

# ಮೀಸಲಾತಿಗೂ ರಾಜಕೀಯ ನಂಟು

ಕರ್ನಾಟಕದಲ್ಲಿ ದಲಿತರ ಮೀಸಲಾತಿಯನ್ನು ಕಿತ್ತುಕೊಂಡು ಮುಸ್ಲಿಂರಿಗೆ ನೀಡಲಾಗುತ್ತಿದೆ ಎಂದು ಖುದ್ದು ಪ್ರಧಾನಿ ನರೇಂದ್ರ ಮೋದಿ ಹೇಳಿಕೆ ನೀಡಿದ ನಂತರ ರಾಜ್ಯದಲ್ಲಿ ರಾಜಕೀಯ ಚರ್ಚೆ ಕಾವು ಪಡೆಯುತ್ತಿದೆ. ಮೋದಿ ಹೇಳಿಕೆ ಖಂಡಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸರಣಿ ಟ್ವಿಟ್ ಮಾಡಿರುವುದು ಚರ್ಚೆ ವೇಗ ಪಡೆದುಕೊಳ್ಳುತ್ತಿರುವುದಕ್ಕೆ ಸಾಕ್ಷಿಯಾಗಿದೆ.

ದಶಕದ ಅವಧಿಯಲ್ಲಿ ಪ್ರಧಾನಿ ನರೇಂದ್ರ ಮೋದಿ ನೇರವಾಗಿ ದ್ವೇಷ ಬಿತ್ತುವ ಭಾಷಣಗಳನ್ನು ಮಾಡಿಲ್ಲ. ಆದರೆ ಅವರ ಪರವಾಗಿ ಅಥವಾ ಬಿಜೆಪಿ ಪರವಾಗಿ ಸಚಿವರು, ಮುಖಂಡರು ದ್ವೇಷ ಬಿತ್ತುವ ಕೆಲಸವನ್ನು ನಿರಂತರವಾಗಿ ಮಾಡಿದ್ದಾರೆ, ಮಾಡುತ್ತಲೇ ಇದ್ದಾರೆ. ಆದರೆ ನರೇಂದ್ರ ಮೋದಿ ಮಾತ್ರ ಸಬ್ ಕಾ ಸಾಥ್ ಸಬ್ ಕಾ ವಿಕಾಸ ಎನ್ನುತ್ತಲೆ ಸಾಗಿದವರು.

ಆದರೆ ಇದೇ ಮೊದಲ ಬಾರಿಗೆ ಕರ್ನಾಟಕ ಸರಕಾರದ ವಿರುದ್ಧ ವಾಗ್ದಾಳಿ ನಡೆಸಿದ ಪ್ರಧಾನಿ ನರೇಂದ್ರ ಮೋದಿ, ದಲಿತರ ಮೀಸಲಾತಿಯನ್ನು ಮುಸ್ಲಿಂರಿಗೆ ಹಂಚಿಕೆ ಮಾಡಲಿದ್ದಾರೆ ಎನ್ನುವ ಹಸಿ ಹಸಿ ಸುಳ್ಳು ಹೇಳುವ ಮೂಲಕ ತಮ್ಮ ಗೌರವ ಘನತೆಗೆ ಧಕ್ಕೆ ತಂದುಕೊಂಡಿದ್ದಾರೆ.

ಮೀಸಲಾತಿ ವಿಷಯದಲ್ಲಿ ಕನಿಷ್ಠ ಜ್ಞಾನ ಇಲ್ಲದೇ ಮಾತಾಡಿದ ಪ್ರಧಾನಿ ನರೇಂದ್ರ ಮೋದಿ ಅವರ ಅಜ್ಞಾನಕ್ಕೆ ಏನನ್ನಬೇಕು ಎಂದು ಪ್ರಜ್ಞಾವಂತರು ಚರ್ಚಿಸುವಂತಾಗಿದೆ. ಕಾರಣ ಸಂವಿಧಾನಬದ್ಧವಾಗಿ ಜಾರಿಯಾದ ಮೀಸಲಾತಿ ವ್ಯವಸ್ಥೆಯನ್ನು ಬದಲಾವಣೆ ಮಾಡಲು ರಾಜ್ಯ ಸರಕಾರಕ್ಕೆ ಸಾಧ್ಯವಿಲ್ಲ. ಅದರಲ್ಲೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಪರಿಷ್ಕರಿಸುವ ಅಧಿಕಾರ ರಾಜ್ಯ ಸರಕಾರಕ್ಕೆ ಇಲ್ಲ. ಮೀಸಲಾತಿ ಪರಿಷ್ಕರಣೆ ಮಾಡಲೇಬೇಕಾದರೆ ಸಂಸತ್ತಿನ ಉಭಯ ಸದನಗಳಲ್ಲಿ ಒಪ್ಪಿಗೆ ಪಡೆದು, ಸಂವಿಧಾನಕ್ಕೆ ತಿದ್ದುಪಡಿ ತಂದು ಜಾರಿ ಮಾಡಬೇಕಾಗುತ್ತದೆ.

ಇಂಥದ್ದೊಂದು ಕನಿಷ್ಠ ಜ್ಞಾನ ಇಲ್ಲದೇ ಕೇವಲ ರಾಜಕೀಯ ಲಾಭಕ್ಕಾಗಿ ಕರ್ನಾಟಕ ಸರಕಾರದ ಮೇಲೆ ಗೂಬೆ ಕೂರಿಸುವ ಪ್ರಯತ್ನ ನಡೆಸಿರುವ ಪ್ರಧಾನಿ ಬಗ್ಗೆ ಅನುಕಂಪ ವ್ಯಕ್ತವಾಗುತ್ತಿದೆ. ಮೀಸಲಾತಿ ವಿಷಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸ್ಪಷ್ಟ ಮಾಹಿತಿ ಇದೆ. ಪ್ರಧಾನಿ ಮೋದಿ ಹೇಳಿಕೆಯಿಂದ ದಲಿತ ಸಮುದಾಯಗಳ ಮೇಲೆ ಯಾವುದೇ ಪರಿಣಾಮ ಬೀರುವುದಿಲ್ಲ. ಆದರೆ ಪ್ರಧಾನಿ ಹೇಳಿಕೆಯಿಂದ ದಲಿತ ಸಮುದಾಯಗಳು ಬಿಜೆಪಿಯಿಂದ ಮತ್ತಷ್ಟು ದೂರವಾಗುವುದಂತೂ ನಿಜ.

## ನಮ್ಮ ಒಂದು ಮತಕ್ಕೆ ಸಂವಿಧಾನ ರಕ್ಷಿಸುವ ಶಕ್ತಿಯಿದೆ । ನಿಮ್ಮ ಮತವನ್ನು ಮಾರಿಕೊಳ್ಳಬೇಡಿ

# ಸಂವಿಧಾನದ ಹಿತರಕ್ಷಣೆ ನಮ್ಮೆಲ್ಲರ ಕರ್ತವ್ಯ

ದೇಶಾದ್ಯಂತ ಚುನಾವಣಾ ಕಣ ರಂಗೇರಿದೆ. ರಾಜಕೀಯ ಪಕ್ಷಗಳ ಕಾರ್ಯಕರ್ತರ ಹುಮ್ಮಸ್ಸು ಕೂಡಾ ಹುಚ್ಚು ಹಿಡಿಸುವಷ್ಟರ ಮಟ್ಟಿಗೆ ಇದೆ. ಆದರೆ, ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ 'ಪ್ರಜಾಪ್ರಭುತ್ವ' ಎಂಬುದರ ಅರ್ಥವೇ ತಿಳಿಯದಷ್ಟು ಜನರು ರಾಜಕೀಯವಾಗಿ ಪ್ರಭಾವಿತರಾಗಿರುವುದು ಪ್ರಜಾಪ್ರಭುತ್ವಕ್ಕೆ ಆತಂಕಕಾರಿ ವಿಷಯ ಎನಿಸಿದರೂ ತಪ್ಪಾಗಲಿಕ್ಕಿಲ್ಲ. ಜಗತ್ತಿನ ಎಲ್ಲ ದೇಶಗಳ ಇತಿಹಾಸವನ್ನು ಸ್ವಲ್ಪ ಇಣುಕಿದರೂ ಭಾರತ ವಿಶಿಷ್ಟ ಮತ್ತು ವಿಶೇಷ ಎನಿಸಿದೆ. ಸ್ವಾತಂತ್ರ್ಯದ ನಂತರ ಭಾರತವು ಸಂವಿಧಾನದ ನಿರ್ದೇಶನದಂತೆ ನಡೆಯುತ್ತಿದೆ. ಸಮಸ್ತ ಭಾರತೀಯರಿಗೆ ಎಲ್ಲ ಜಾತಿ, ಧರ್ಮ, ಪಂಥಗಳನ್ನು ಮೀರಿ ಸಮಾನ ಅವಕಾಶಗಳನ್ನು ಕಲ್ಪಿಸಿ ಮೂಲಭೂತ ಹಕ್ಕುಗಳನ್ನು ಒದಗಿಸಿ, ಒಬ್ಬ ಪ್ರಜೆಯಾದವನು ಪ್ರಧಾನಿಯನ್ನು ಕೂಡ ಪ್ರಶ್ನಿಸಬಹುದು ಎಂಬ ಶ್ರೇಷ್ಠ ಸಂದೇಶವನ್ನು ಸಾರಿದ ಬಲಿಷ್ಠ ಸಂವಿಧಾನ ನಮ್ಮದು.

ಆದರೆ ನಮ್ಮ ಬಲಿಷ್ಠ ಸಂವಿಧಾನ ರಾಜಕೀಯ ಪಕ್ಷಗಳ, ಅಧಿಕಾರದಾಹಿ ನಾಯಕರ ಕೈಯಲ್ಲಿ ಸಿಕ್ಕು ದಿನ ದಿನಕ್ಕೂ ನಲುಗುತ್ತಿದೆ. ಕೆಲವು ವರ್ಷಗಳಿಂದ ರಾಜಕೀಯ ನಾಯಕರು ಸಂವಿಧಾನ ಬದಲಾವಣೆಯ ಕುರಿತು ನೀಡುವ ಬಹಿರಂಗ ಹೇಳಿಕೆಗಳು ಅಕ್ಷರಶಃ ಪ್ರಜ್ಞಾವಂತ ಭಾರತೀಯರಿಗೆ ಭಯ ಹೆಚ್ಚಿಸಿದ್ದು ಸುಳ್ಳಲ್ಲ. ಯಾಕೆಂದರೆ ಇಂದು ನಾವು ನೀವೆಲ್ಲರೂ ನಿರ್ಭಯವಾಗಿ ಯಾರ ಹಂಗಿನಲ್ಲಿಯೂ ಇರದೇ ಬದುಕುತ್ತಿದ್ದೇವೆ ಎಂದರೆ ಅದರ ಹಿಂದೆ ಸಂವಿಧಾನ ನಮಗೆ ಕೊಟ್ಟಿರುವ ಹಕ್ಕುಗಳೇ ಕಾರಣ.

ಅಂಥ ಬಲಿಷ್ಠ ಸಂವಿಧಾನವನ್ನೇ ಸಂವಿಧಾನ ಬದ್ಧ ಹುದ್ದೆಯಲ್ಲಿರುವ ನಾಯಕರುಗಳು ಬದಲಾವಣೆ ಮಾಡುತ್ತೇವೆ ಎನ್ನುತ್ತಾರೆ ಎಂದರೆ ಖಂಡಿತವಾಗಿಯೂ ಪ್ರತೀ ಭಾರತೀಯನೂ ಯೋಚಿಸಿಲೇಬೇಕು. ನಾವು ಎಡವಿದ್ದು ಎಲ್ಲಿ ಎಂಬುದನ್ನು ಅರಿತುಕೊಳ್ಳಲೇಬೇಕು. ಯಾಕೆಂದರೆ ಸಂವಿಧಾನ ಬದಲಾದರೆ ನಾವು ರಾಜಪ್ರಭುತ್ವದಲ್ಲಿ ಬದುಕಬೇಕಾಗಬಹುದು. ರಾಜ ಪ್ರಭುತ್ವ ಎಂಬುದು ಒಂದು ರೀತಿಯ ಸರ್ವಾಧಿಕಾರ. ಅಲ್ಲಿ ಪ್ರಜೆಗಳ ಹಿತಾಸಕ್ತಿಗಿಂತ ರಾಜಕೀಯ ಹಿತಾಸಕ್ತಿಗಳು ತಾಂಡವವಾಡುತ್ತವೆ ಎಂಬುದು ಸುಳ್ಳಲ್ಲ.

ಹಾಗಾಗಿ ನಾವು ಆಗು ಹೋಗುಗಳ ಕುರಿತಾಗಿ, ಭವಿಷ್ಯದ ಆಲೋಚನೆಗಳನ್ನು ವಿಮರ್ಶಿಸಿ ಯಾವುದು ಸೂಕ್ತ ಎಂಬುದನ್ನು ಅರಿತು ಮತದಾನ ಮಾಡುವ ಜವಾಬ್ದಾರಿ ನಮ್ಮ ಮೇಲಿದೆ. ಚುನಾವಣೆ ವ್ಯಾಪಾರ ಅಲ್ಲ. ನಾನು ಮತ್ತು ನನ್ನ ಮತ ಮಾರಾಟಕ್ಕಿಲ್ಲ. ಪ್ರಜಾಪ್ರಭುತ್ವದಲ್ಲಿ ಮತದಾರರೇ ಶ್ರೇಷ್ಠ. ಮತದಾರರಿಂದ ಮಾತ್ರ ಸಮಾಜದ ಬದಲಾವಣೆ ಸಾಧ್ಯ. ಅದಕ್ಕಾಗಿ ಯಾರೂ ನಿಮ್ಮ ಮತಗಳನ್ನು ಮಾರಿಕೊಳ್ಳಬೇಡಿ. ಎಲ್ಲ ಪ್ರಜೆಗಳು ಮೊದಲು ನಾವು ಏಕೆ ಮತ ಹಾಕಬೇಕು ಎಂಬುದನ್ನು ತಿಳಿದುಕೊಳ್ಳಬೇಕು.

ನಾವು ಏಕೆ ಮತ ಹಾಕಬೇಕು?: ನಾವು ಏಕೆ ಮತ ಹಾಕಬೇಕು ಮತ್ತು ಮತ ಹಾಕಿದರೆ ನಮಗೆ ಸಿಗುವ ಅನುಕೂಲ ಅನಾನುಕೂಲಗಳು ಏನು? ನನ್ನ ಒಂದು ಮತಕ್ಕೆ ಸಮಾಜವನ್ನು ಬದಲಿಸುವ ಶಕ್ತಿ ಇದೆಯಾ? ರಾಜಕೀಯ ವ್ಯವಸ್ಥೆ ಬಗ್ಗೆ ಜನರಿಗೆ ಇರುವ ಅಭಿಪ್ರಾಯ ಏನು? ಹೀಗೆ ಹಲವಾರು ಪ್ರಶ್ನೆಗಳು ಮತದಾರರಲ್ಲಿ ಇವೆ. ಸದೃಢ ಪ್ರಜಾಪ್ರಭುತ್ವದ ನಿರ್ಮಾಣಕ್ಕೆ ಮತದಾರರ ಸಹಭಾಗಿತ್ವ ಅತ್ಯಗತ್ಯ. ಪ್ರತಿಯೊಬ್ಬರೂ ತಪ್ಪದೇ ಮತ ಹಾಕಬೇಕು. ಉತ್ತಮ ಅಭ್ಯರ್ಥಿಯನ್ನು ಆಯ್ಕೆ ಮಾಡಬೇಕು. ಇದರಿಂದ ದೇಶ ಸದೃಢವಾಗುತ್ತದೆ ಎಂಬ ವಿಷಯ ಮತದಾರರು ತಿಳಿದುಕೊಳ್ಳಬೇಕು.

ಎಲ್ಲ ಮತದಾರರು ತಮ್ಮ ಮತವನ್ನು ಮಾರಿಕೊಳ್ಳದೇ ವೈಯಕ್ತಿಕ ಹಿತಾಸಕ್ತಿ, ಆಸೆ, ಆಮಿಷಗಳನ್ನು ಬದಿಗಿಟ್ಟು ಸಂವಿಧಾನವನ್ನು ರಕ್ಷಣೆ ಮಾಡುವಂತಹ, ಸಂವಿಧಾನದ ಕುರಿತಾಗಿ ಅಭಿಮಾನವುಳ್ಳ, ಸಂವಿಧಾನದ ಆಶಯಗಳನ್ನು ತನ್ನ ಜೀವನದಲ್ಲಿ ಅಳವಡಿಸಿಕೊಂಡಿರುವ ಸೂಕ್ತ ಅಭ್ಯರ್ಥಿಗೆ ನಮ್ಮ ಅಮೂಲ್ಯ ಮತವನ್ನು ನೀಡಬೇಕು. 'ದೇಶ ನಮಗೇನು ನೀಡಿದೆ ಎನ್ನುವುದಕ್ಕಿಂತ, ದೇಶಕ್ಕಾಗಿ ನಾವೇನು ನೀಡಿದ್ದೇವೆ' ಎಂಬುದು ನಾವು ಚಿಕ್ಕಂದಿನಿಂದಲೂ ಕಲಿತ ಪಾಠ. ಆದರೆ, ನಾವು ನ್ಯಾಯಯುತವಾಗಿ ನೀಡುವ ಒಂದು ಮತ ದೇಶವನ್ನು ರಕ್ಷಿಸಬಲ್ಲದು, ಸಂವಿಧಾನವನ್ನು ಕಾಪಾಡಬಲ್ಲದು, ಪ್ರಜೆಗಳ ಹಿತಾಸಕ್ತಿಯನ್ನು ಅರಿಯಬಲ್ಲದು ಎಂಬುದನ್ನು ಅವಲೋಕಿಸಿ ಚಲಾಯಿಸಿದ ಮತ ಮಾತ್ರ ಭಾರತದ ರಾಜಕಾರಣದ ದಿಕ್ಕನ್ನು ಬದಲಿಸಲು ಸಾಧ್ಯ.

ಅಧಿಕಾರ ಎಂಬುದು ಪ್ರಜಾ ಪ್ರಭುತ್ವ ವ್ಯವಸ್ಥೆಯಲ್ಲಿ ನಿಂತ ನೀರಾಗಬಾರದು, ಹರಿಯುವ ನೀರಾಗಬೇಕು. ಹರಿಯುವ ನೀರಿನಲ್ಲಿರುವ ಪರಿಶುದ್ಧತೆ ನಿಂತ ನೀರಿನಲ್ಲಿರಲು ಸಾಧ್ಯವಿಲ್ಲ. ನಿಂತ ನೀರು ಎಷ್ಟು ಮಲಿನವೋ, ಅಧಿಕಾರ ಏಕ ವ್ಯಕ್ತಿ ಒಡೆತನದಲ್ಲಿರುವುದು ಅಷ್ಟೇ ಮಲೀನವಾದುದು. ಮಲಿನತೆಯನ್ನು ಸಹಿಸಿಕೊಳ್ಳುವ ಮನೋಭಾವ ನಮ್ಮದಾಗಬಾರದು, ಶುದ್ಧತೆಯನ್ನು ಕಾಪಾಡಿಕೊಳ್ಳುವ ಮನಸ್ಥಿತಿ, ಪ್ರಜ್ಞಾವಂತಿಕೆ ನಮ್ಮದಾಗಬೇಕು. ಅದಕ್ಕಾಗಿ ಯಾವುದೇ ಮತದಾರರು ನಿಮ್ಮ ಮತವನ್ನು ಯಾವುದೇ, ಆಸೆ, ಆಮಿಷಗಳಿಗೆ, ಭಾವನಾತ್ಮಕ ವಿಷಯಗಳಿಗೆ ಬಲಿಯಾಗದೆ, ನಮ್ಮ ಸುತ್ತ ಮುತ್ತಲಿನ ಅಭಿವೃದ್ಧಿಯನ್ನು ಪರಿಗಣಿಸಿ, ಅಭಿವೃದ್ಧಿಯ ಕನಸು ಹೊತ್ತಿರುವ, ನಿಮಗೆ ಸೂಕ್ತ ಎನಿಸಿರುವ ಅಭ್ಯರ್ಥಿಗೆ ಸ್ವ ಆಲೋಚನೆಯಿಂದ ಯೋಚಿಸಿ, ಮತವನ್ನು ಮಾರಿಕೊಳ್ಳದೇ ಮತ ಚಲಾಯಿಸಿ. ನಿಮ್ಮ ಒಂದು ಮತಕ್ಕೆ ಸಂವಿಧಾನ ರಕ್ಷಿಸುವ ಶಕ್ತಿಯಿದೆ, ದೇಶದ ಹಿತಾಸಕ್ತಿಯನ್ನು ಕಾಪಾಡುವ ಶಕ್ತಿಯಿದೆ. ಜನರಿಗೆ ಸ್ಪಂದಿಸುವ ನಾಯಕನನ್ನು ನಾಡಿಗೆ ಒದಗಿಸುವ ಶಕ್ತಿಯಿದೆ ಎಂಬುದನ್ನು ಮರೆಯದೆ ಗಮನದಲ್ಲಿಟ್ಟುಕೊಂಡು ಆತ್ಮಾಭಿಮಾನದಿಂದ ಮತವನ್ನು ನೀಡಿ.





– ಪ್ರಶಾಂತ ಮಡಿವಾಳರ, ಶಿರೋಳ.

## ಪ್ರಧಾನಿ ಮೋದಿಗೆ ಸೋಲಿನ ಹತಾಶೆ ಕಾಡ್ತಿದೆ : ಡಿಕೆ ಶಿವಕುಮಾರ್ ಟಾಂಗ್..!



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಹೆಣ್ಣು ಮಕ್ಕಳ ಮಾಂಗಲ್ಯವನ್ನು ಕಿತ್ತುಕೊಳ್ಳಲಿದೆ ಎಂಬ ಪ್ರಧಾನಿ ಮೋದಿ ಹೇಳಿಕೆಗೆ ಡಿಸಿಎಂ ಡಿಕೆ ಶಿವಕುಮಾರ್ ತಿರುಗೇಟು ನೀಡಿದ್ದಾರೆ. ಈ ಬಗ್ಗೆ ಕಿಡಿಕಾರಿದ ಡಿಕೆ ಶಿವಕುಮಾರ್, ಪ್ರಧಾನಿ ಮೋದಿಗೆ ಸೋಲಿನ ಹತಾಶೆ ಕಾಡ್ತಿದೆ. ಜನರನ್ನು ದಿಕ್ಕು ತಪ್ಪಿಸಲು ಮಾಂಗಲ್ಯದ ಹೇಳಿಕೆ ಕೊಡ್ತಿದ್ದಾರೆ ಎಂದು ಗುಡುಗಿದ್ದಾರೆ.

ಈ ಬಗ್ಗೆ ಬೆಂಗಳೂರಿನಲ್ಲಿ ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿ, ಮೋದಿ ಸರ್ಕಾರ ಬಂದ್ಮೇಲೆ ಚಿನ್ನದ ಬೆಲೆ ಶೇ.300ರಷ್ಟು ಏರಿಕೆಯಾಗಿದೆ. ಮಾಂಗಲ್ಯವನ್ನು ಮಾಡಿಸಲೂ ಆಗದ ಸ್ಥಿತಿಯನ್ನು ಬಿಜೆಪಿಯವರು ನಿರ್ಮಾಣ ಮಾಡಿದ್ದಾರೆ. ಇನ್ನು ಕಿತ್ತುಕೊಳ್ಳೋದು ಎಲ್ಲಿಂದ ಬಂತು ಎಂದು ಡಿಕೆಶಿ ವಾಗ್ದಾಳಿ ನಡೆಸಿದ್ದಾರೆ.

ಇನ್ನು ಪ್ರಿಯಾಂಕಾ ಗಾಂಧಿ ಬೆಂಗಳೂರಿನಲ್ಲಿ ನೋವಿನ ಮಾತುಗಳನ್ನೇ ಹೇಳಿದ್ದಾರೆ. ದೇಶದ ಐಕ್ಯತೆಗಾಗಿ ಇಂದಿರಾ ಚಿನ್ನ ಕೊಟ್ರು, ಸೋನಿಯಾ ಮಾಂಗಲ್ಯ ಕಳ್ಕೊಂಡ್ರು ಇಂಥಾ ಪಕ್ಷ ಮಾಂಗಲ್ಯ ಕಸಿದುಕೊಳ್ಳೋ ಆಲೋಚನೆ ಮಾಡುತ್ತಾ ಎಂದು ಬಿಜೆಪಿ ನಾಯಕರಿಗೆ ಡಿಕೆಶಿ ತಿರುಗೇಟು ನೀಡಿದ್ದಾರೆ.

## ಮೈಸೂರಲ್ಲಿ ವಿನೂತನ ಮತದಾನ ಜಾಗೃತಿ : ಮತದಾನ ಮಾಡಿದರೆ ಒಂದು ಕೆಜಿ ಗೋಧಿ ಹಿಟ್ಟು ಫ್ರೀ..!

■ ವಿಜಯಸಾಕ್ಷಿ ಸುದ್ದಿ, ಮೈಸೂರು

ಲೋಕಸಭಾ ಚುನಾವಣೆಯ ಮೊದಲನೇ ಹಂತದ ಮತದಾನ ನಾಳೆ ಅಂದರೆ ಏಪ್ರಿಲ್ 26ರಂದು ನಡೆಯಲಿದೆ. ಕರ್ನಾಟಕದ 28 ಲೋಕಸಭಾ ಕ್ಷೇತ್ರಗಳ ಪೈಕಿ 14 ಕ್ಷೇತ್ರಗಳಲ್ಲಿ ಮತದಾನ ನಡೆಯಲಿದೆ. ಹೀಗಾಗಿ ಮೈಸೂರಲ್ಲಿ ವಿನೂತನವಾಗಿ ಮತದಾನ ಜಾಗೃತಿ ಮೂಡಿಸಲಾಗುತ್ತಿದೆ.



ನಾಳೆ ಬೆಳಗ್ಗೆ 7 ಗಂಟೆಗೆ ಆರಂಭವಾಗಲಿರುವ ಮತದಾನ ಸಂಜೆ 6 ಗಂಟೆಯವರೆಗೂ ಮತ ಚಲಾಯಿಸಲು ಅವಕಾಶವಿದೆ. ಮತದಾನ ಮಾಡಿ ಬಂದರೆ ಒಂದು ಕೆಜಿ ಗೋಧಿ ಹಿಟ್ಟು ಫ್ರೀಯಾಗಿ ನೀಡೋದಾಗಿ ಬಿ ಶಿಪ್ ಹಾಗೂ ವಾಸವಿ ಯುವಜನ ಸಂಘ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಿದೆ.

ನಗರದ ದೇವರಾಜ ಮಾರುಕಟ್ಟೆ ಬಳಿಯ ಚಿಕ್ಕ ಗಡಿಯಾರ ವೃತ್ತದ ಬಳಿ ಮಳಿಗೆ ಆರಂಭಿಸಲಾಗಿದ್ದು, ನಾಳೆ ಮತದಾನ ಮಾಡಿ ಶಾಯಿ ಹಾಕಿಸಿಕೊಂಡಿದ್ದನ್ನು ತೋರಿಸಿದರೆ ಉಚಿತವಾಗಿ ಒಂದು ಕೆಜಿ ಗೋಧಿ ಹಿಟ್ಟು ವಿತರಣೆ ಮಾಡಲಾಗುತ್ತೆ. ಮತದಾನ ಮಾಡದೇ ಎಲ್ಲಿಯೂ ಹೋಗದಿರಿ ಎಂಬ ಸಂದೇಶದೊಂದಿಗೆ ಜಾಗೃತಿ ಮೂಡಿಸಲಾಗುತ್ತಿದೆ.

## ಪತಂಜಲಿ ಯೋಗ ಸಮಿತಿ ಪದಾಧಿಕಾರಿಗಳ ಆಯ್ಕೆ




■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಪತಂಜಲಿ ಯೋಗ ಸಮಿತಿಯ ರಾಜ್ಯ ಪ್ರಭಾರಿಗಳಾದ ಭವರಲಾಲ್ ಆರ್ಯ ಹಾಗೂ ಗದಗ ಪತಂಜಲಿ ಯೋಗ ಸಮಿತಿಯ ಸರ್ವ ಸದಸ್ಯರ ಸಮ್ಮುಖದಲ್ಲಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ತಾಲೂಕಾ ಪ್ರಭಾರಿಗಳನ್ನಾಗಿ ಮಂಜುನಾಥ ಅಳವಂಡಿ, ಮಹಿಳಾ ಪತಂಜಲಿ ಯೋಗ ಸಮಿತಿಯ ತಾಲೂಕಾ ಪ್ರಭಾರಿಗಳನ್ನಾಗಿ ಮಂಜುಳಾ ಇಟಗಿ ಅವರನ್ನು ಆಯ್ಕೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ಪತಂಜಲಿ ಯೋಗ ವಾರಿಯರ್ ಪ್ರಶಸ್ತಿಯನ್ನು ಮಂಜುನಾಥ್ ಅಳವಂಡಿ, ಮಂಜುಳಾ ಇಟಗಿ, ರೇಣುಕಾ ಅಳವಂಡಿ, ಜಗದೀಶ್ ಸೋನಿ, ಬಿ.ಆರ್. ಕುಲಕರ್ಣಿ, ನಾರಾಯಣಪ್ಪ ಗುಬ್ಬಿ ಅವರಿಗೆ ಪ್ರದಾನ ಮಾಡಲಾಯಿತು.

ಪತಂಜಲಿ ಯೋಗ ಸಮಿತಿಯ ಅಶೋಕ್ ಸವಣೂರು, ಶಂಕರ್ ಕುಕುನೂರು, ಶ್ರೀಕಾಂತ್ ಅಳವಂಡಿ, ಶ್ವೇತಾ ಅಳವಂಡಿ, ವಿಜಯಲಕ್ಷ್ಮೀ ಕುಂಬಾರ್ ಮುಂತಾದವರಿದ್ದರು.

## ಪ್ರಧಾನಿ ಮೋದಿ, ರಾಹುಲ್ ಗಾಂಧಿಗೆ ಕೇಂದ್ರ ಚುನಾವಣಾ ಆಯೋಗದಿಂದ ನೋಟಿಸ್ ಜಾರಿ..!



■ ವಿಜಯಸಾಕ್ಷಿ ಸುದ್ದಿ, ದೆಹಲಿ

ಚುನಾವಣಾ ಪ್ರಚಾರ ವೇಳೆ ನಾಯಕರು ಮಾಡಿರುವ ಭಾಷಣ ಭಾರೀ ವಿವಾದಕ್ಕೆ ಕಾರಣವಾಗಿದೆ. ಇದೀಗ ಭಾಷಣದ ವೇಳೆ ವಿವಾದಾತ್ಮಕ ಹೇಳಿಕೆ ನೀಡಿ ನೀತಿ ಸಂಹಿತಿ ಉಲ್ಲಂಘಿಸಿದ ಆರೋಪದಡಿಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸೇರಿದಂತೆ ಇತರ ಕೆಲ ನಾಯಕರಿಗೆ ಕೇಂದ್ರ ಚುನಾವಣಾ ಆಯೋಗ ನೋಟಿಸ್ ನೀಡಿದೆ. ತಮ್ಮ ಭಾಷಣಗಳ ಬಗ್ಗೆ ಸ್ಪಷ್ಟನೆ ನೀಡುವಂತೆ ಆಯೋಗದ ನೋಟಿಸ್ ನೀಡಿದೆ.

ಏಪ್ರಿಲ್ 29ರ ಬೆಳಗ್ಗೆ 11ಗಂಟೆಯ ಒಳಗೆ ಉತ್ತರ ನೀಡುವಂತೆ ನೋಟಿಸ್‌ನಲ್ಲಿ ಹೇಳಿದೆ. ನಾಯಕರ ಮೇಲೆ ಚುನಾವಣಾ ಮಾದರಿ ನೀತಿ ಸಂಹಿತೆ ಉಲ್ಲಂಘನೆ ಆರೋಪ ಕೇಳಿಬಂದಿದೆ. ಈ ಬಗ್ಗೆ ಕಾಂಗ್ರೆಸ್ ಹಾಗೂ ಬಿಜೆಪಿ ಪರಸ್ಪರ ಚುನಾವಣಾ ಆಯೋಗಕ್ಕೆ ದೂರು ಕೊಟ್ಟಿದ್ದು, ಹಾಗಾಗಿ ಧರ್ಮ, ಜಾತಿ ಪ್ರಸ್ತಾಪಿಸಿ ಆಕ್ಷೇಪಿತ ಪದ ಬಳಕೆ ಕುರಿತಂತೆ ಸ್ಪಷ್ಟನೆ ನೀಡುವಂತೆ ಆಯೋಗ ನೋಟಿಸ್ ನೀಡಿದೆ.

AICC ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಬಿಜೆಪಿ ಅಧ್ಯಕ್ಷ ನಡ್ಡಾಗೂ ನೋಟಿಸ್ ಜಾರಿಯಾಗಿದ್ದು, ಕಾಂಗ್ರೆಸ್ ಪ್ರಣಾಳಿಕೆ ವಿಚಾರವಾಗಿ ಮೋದಿ-ರಾಹುಲ್ ಪರಸ್ಪರ ಟೀಕೆ ಮಾಡಿದ್ದರು. ಇದೀಗ ಜನಪ್ರತಿನಿಧಿ ಕಾಯ್ದೆ ಸೆಕ್ಷನ್ 77ರ ಪ್ರಕಾರ ಆಯೋಗ ನೋಟಿಸ್ ಜಾರಿ ಮಾಡಿದೆ. ಸ್ಟಾರ್ ಕ್ಯಾಂಪೇನರ್‌ಗಳ ಭಾಷಣಕ್ಕೆ ಆಯೋಗ ಪಕ್ಷದ ಅಧ್ಯಕ್ಷರನ್ನು ಹೊಣೆ ಮಾಡಿದೆ.

## ಬೆಂಗಳೂರಿನಲ್ಲಿ ರೈಲಿಗೆ ಸಿಲುಕಿ ಮೂವರು ಸಾವು..!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರೈಲಿಗೆ ಸಿಲುಕಿ 25 ವರ್ಷದ ಮೂವರು ಯುವಕರು ಸಾವನ್ನಪ್ಪಿದ ಘಟನೆ ಬೆಂಗಳೂರಿನಲ್ಲಿ ಇಂದು ಮಧ್ಯಾಹ್ನ ಸುಮಾರು 1:45ರ ವೇಳೆಗೆ ನಡೆದಿದೆ.

ಬೆಂಗಳೂರಿನ ಬೈಯಪ್ಪನಹಳ್ಳಿ ರೈಲು ನಿಲ್ದಾಣದ ಬಳಿ ಮೂವರು ಯುವಕರು ರೈಲಿಗೆ ಸಿಲುಕಿ ಸಾವನ್ನಪ್ಪಿದ್ದು, ಇವರನ್ನು ಆಂಧ್ರಪ್ರದೇಶದ ಮೂಲದ ಚಿತ್ತೂರಿನ ಮೂಲದವರು ಎಂದು ಹೇಳಲಾಗಿದೆ. ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಇನ್ನು ಘಟನಾ ಸ್ಥಳಕ್ಕೆ ಆಗಮಿಸಿದ ಬೈಯಪ್ಪನಹಳ್ಳಿ ಪೊಲೀಸರು ಪರಿಶೀಲನೆ ಕಾರ್ಯ ಮಾಡುತ್ತಿದ್ದಾರೆ ಎನ್ನುವ ಮಾಹಿತಿ ಲಭ್ಯವಾಗಿದೆ. ಈ ಬಗ್ಗೆ ಇನ್ನೂ ಹೆಚ್ಚಿನ ಮಾಹಿತಿ ತಿಳಿದುಬರಬೇಕಿದೆ.

## ಕಾಂಗ್ರೆಸ್ ಪ್ರಣಾಳಿಕೆ ಬಗ್ಗೆ ವಿವರಿಸಲು ಸಮಯಾವಕಾಶ ಕೋರಿ ಪ್ರಧಾನಿಗೆ ಖರ್ಗೆ ಪತ್ರ



■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲೋಕಸಭೆ ಚುನಾವಣೆಯ ಕಾಂಗ್ರೆಸ್ ಪ್ರಣಾಳಿಕೆ 'ನ್ಯಾಯಪತ್ರ'ದ ಕುರಿತು ಪ್ರಧಾನಿ ಮೋದಿ ಸರಣಿ ಹೇಳಿಕೆಗಳನ್ನು ಕೊಡುತ್ತಿದ್ದು, ಈ ಹಿನ್ನೆಲೆ ಪ್ರಣಾಳಿಕೆಯ ಕುರಿತು ವಿವರಿಸಲು ಸಮಯ ಕೋರಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪತ್ರ ಬರೆದಿದ್ದಾರೆ.

ಖರ್ಗೆ ಪತ್ರವನ್ನು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಎಕ್ಸ್‌ನಲ್ಲಿ ಹಂಚಿಕೊಂಡಿದ್ದು, "ಯುವಕರು, ಮಹಿಳೆಯರು, ರೈತರು, ಕಾರ್ಮಿಕರು ಮತ್ತು ಅಂಚಿನಲ್ಲಿರುವ ಜನರಿಗೆ ನ್ಯಾಯ ಒದಗಿಸುವುದು' ಕಾಂಗ್ರೆಸ್ ನ್ಯಾಯ ಪತ್ರದ ಗುರಿಯಾಗಿದೆ ಎಂದು ಖರ್ಗೆ ಪ್ರಧಾನಿಗೆ ತಿಳಿಸಿದ್ದಾರೆ. ನ್ಯಾಯ ಪತ್ರದ ಕುರಿತು 'ವಿವರಿಸಲು' ಮೋದಿ ಅವರನ್ನು ಭೇಟಿ ಮಾಡಲು ಸಿದ್ಧರಿರುವುದಾಗಿ ಹೇಳಿದ್ದಾರೆ. ಅಲ್ಲದೆ, ಪ್ರಧಾನಿಗೆ ತಮ್ಮ ಸಲಹೆಗಾರರು ತಪ್ಪು ಮಾಹಿತಿ ನೀಡುತ್ತಿರುವುದಾಗಿ ತಿಳಿಸಿದ್ದಾರೆ" ಎಂದು ಬರೆದುಕೊಂಡಿದ್ದಾರೆ.

ಏಪ್ರಿಲ್ 6 ರಂದು ರಾಜಸ್ಥಾನದ ಅಜ್ಮೀರ್‌ನಲ್ಲಿ ನಡೆದ ಬಿಜೆಪಿಯ ಚುನಾವಣಾ ರ್‍ಯಾಲಿಯಲ್ಲಿ ಪ್ರಧಾನಿ ಮೋದಿಯವರು " ಕಾಂಗ್ರೆಸ್ ಪ್ರಣಾಳಿಕೆಯನ್ನು ಸುಳ್ಳಿನ ಕಂತೆ ಎಂದು ಕರೆದಿದ್ದರು. ಪ್ರಣಾಳಿಕೆಯ ಪ್ರತಿ ಪುಟವು 'ಭಾರತವನ್ನು ತುಂಡು ತುಂಡುಗಳಾಗಿ ಒಡೆಯುತ್ತದೆ' ಎಂದು ಹೇಳಿದ್ದರು. ಮುಸ್ಲಿಂ ಲೀಗ್‌ನ ವಿಚಾರಗಳನ್ನು ಭಾರತದ ಮೇಲೆ ಹೇರಲು ಕಾಂಗ್ರೆಸ್ ಬಯಸುತ್ತಿದೆ ಎಂದು ಆರೋಪಿಸಿದ್ದರು. ಸ್ವಾತಂತ್ರ್ಯದ ಸಮಯದಲ್ಲಿ ಮುಸ್ಲಿಂ ಲೀಗ್‌ನಲ್ಲಿದ್ದ ಅದೇ ಚಿಂತನೆಯು ಕಾಂಗ್ರೆಸ್ ಪ್ರಣಾಳಿಕೆಯಲ್ಲಿ ಪ್ರತಿಬಿಂಬಿಸುತ್ತಿದೆ ಎಂದು ಮೋದಿ ಆರೋಪಿಸಿದ್ದರು.

## ಮೀಸಲಾತಿ ಹೇಳಿಕೆ: ಆಧಾರ ಸಹಿತ ಸಾಬೀತುಪಡಿಸುವಂತೆ ಪ್ರಧಾನಿ ಮೋದಿಗೆ ಸಿಎಂ ಸಿದ್ದರಾಮಯ್ಯ ಸವಾಲು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಹಿಂದುಳಿದ ಜಾತಿ ಮತ್ತು ದಲಿತರ ಮೀಸಲಾತಿಯನ್ನು ಕಿತ್ತು ಮುಸ್ಲಿಮರಿಗೆ ನೀಡಲು ಕಾಂಗ್ರೆಸ್ ಹೊರಟಿದೆ ಎಂಬ ಹೇಳಿಕೆಯನ್ನು ಆಧಾರ ಸಹಿತ ಸಾಬೀತುಪಡಿಸಬೇಕು. ಇಲ್ಲದಿದ್ದರೆ ದೇಶದ ಜನರ ಕ್ಷಮೆ ಕೇಳಬೇಕು ಎಂದು ಪ್ರಧಾನಿ ನರೇಂದ್ರ ಮೋದಿಯವರಿಗೆ ಸಿಎಂ ಸಿದ್ದರಾಮಯ್ಯ ಸವಾಲು ಹಾಕಿದ್ದಾರೆ.



ಪ್ರಧಾನಿ ಹೇಳಿಕೆಗೆ ಎಕ್ಸ್‌ನಲ್ಲಿ ಪ್ರತಿಕ್ರಿಯೆ ನೀಡಿರುವ ಸಿಎಂ, ಹಿಂದುಳಿದ ಜಾತಿ ಮತ್ತು ದಲಿತರ ಮೀಸಲಾತಿಯನ್ನು ಕಿತ್ತು ಮುಸ್ಲಿಮರಿಗೆ ನೀಡಲು ಕಾಂಗ್ರೆಸ್ ಹೊರಟಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳುತ್ತಿರುವ ಹಸಿ ಸುಳ್ಳು. ಇದು ಅವರ ಅಜ್ಞಾನವನ್ನಷ್ಟೇ ಅಲ್ಲ, ಸೋಲಿನ ಭೀತಿಯಲ್ಲಿರುವ ಅವರ ಹತಾಶೆಯನ್ನೂ ಸೂಚಿಸುತ್ತದೆ. ದೇಶದಲ್ಲಿ ಇಲ್ಲಿಯವರೆಗಿನ ಯಾರೂ ಕೂಡಾ ಪ್ರಧಾನಿ ಪಟ್ಟವನ್ನು ಇಂತಹ ಕೀಳು ಮಟ್ಟಕ್ಕೆ ಇಳಿಸಿಲ್ಲ ಎಂದಿದ್ದಾರೆ.

ಜವಾಬ್ದಾರಿ ಸ್ಥಾನದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ಒಂದೋ ಈ ಬೇಜವಾಬ್ದಾರಿತನದ ಆರೋಪವನ್ನು ಆಧಾರಗಳನ್ನು ನೀಡಿ ಸಾಬೀತುಪಡಿಸಬೇಕು. ಇಲ್ಲದೆ ಇದ್ದರೆ ದೇಶದ ಜನರ ಕ್ಷಮೆ ಕೇಳಬೇಕು ಎಂದು ಸಿಎಂ ಆಗ್ರಹಿಸಿದ್ದಾರೆ.



ಹಾವೇರಿ-ಗದಗ ಲೋಕಸಭಾ ಮತಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿಯವರು ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷರಾದ ರಾಜು ಕುರುಡಗಿಯವರ ನಿವಾಸಕ್ಕೆ ಆಗಮಿಸಿದ ಸಂದರ್ಭದಲ್ಲಿ ಗದಗ ಜಿಲ್ಲಾ ಎಸ್.ಸಿ ಘಟಕದ ಹಿರಿಯ ಮುಖಂಡ ಹನಮಂತಪ್ಪ ಅಳವಂಡಿಯವರೊಂದಿಗೆ ಗದಗ ಜಿಲ್ಲೆಯಲ್ಲಿ ಬಿಜೆಪಿ ಪ್ರಚಾರದ ಬಗ್ಗೆ ಹಾಗೂ ಬೆಟಗೇರಿ ಭಾಗದಲ್ಲಿ ಪ್ರಚಾರ ಕೈಗೊಂಡಿರುವ ಬಗ್ಗೆ ಮಾಹಿತಿ ಪಡೆದುಕೊಂಡರು.

### ಸಾಮರ್ಥ್ಯ ಸೌಧದಲ್ಲಿ ನಡೆದ ಬರ ನಿರ್ವಹಣೆ ಸಭೆಯಲ್ಲಿ ಬಿ. ಜಗದೇವ ಸೂಚನೆ

# ಬರ ನಿರ್ವಹಣೆಯಲ್ಲಿ ನಿಷ್ಕಾಳಜಿ ಬೇಡ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ಬಾರಿ ತಾಲೂಕು ವ್ಯಾಪ್ತಿಯಲ್ಲಿ ಬರಗಾಲವಿದ್ದು, ಮಳೆ ಕೊರತೆ ಉಂಟಾಗಿರುವುದರಿಂದ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾ ಪಂಚಾಯಿತಿ ಯೋಜನಾ ನಿರ್ದೇಶಕರು ಮತ್ತು ತಾಲೂಕು ಪಂಚಾಯಿತಿ ಆಡಳಿತಾಧಿಕಾರಿ ಬಿ. ಜಗದೇವ ಹೇಳಿದರು.

ಅವರು ತಾಲೂಕು ಪಂಚಾಯಿತಿ ಸಾಮರ್ಥ್ಯ ಸೌಧದಲ್ಲಿ ಗುರುವಾರ ನಡೆದ ಬರ ನಿರ್ವಹಣೆ ಸಭೆಯಲ್ಲಿ ಮಾತನಾಡಿ, ಬರ ನಿರ್ವಹಣೆ ಬಗ್ಗೆ ನಿಷ್ಕಾಳಜಿ ವಹಿಸದೆ ಎಲ್ಲ ಇಲಾಖೆಗಳ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ನಿಗದಿತ ಸಮಯದಲ್ಲಿ ನಿರ್ವಹಿಸಬೇಕೆಂದು ಸೂಚನೆ ನೀಡಿದರು. ಮೇ ಮತ್ತು ಜೂನ್ ತಿಂಗಳಲ್ಲಿ ನೀರಿನ ಸಮಸ್ಯೆ ಎದುರಾಗದಂತೆ ಪೂರ್ವ ನಿಯೋಜಿತ ರೂಪುರೇಷೆಯನ್ನು ತಯಾರಿಸುವಂತೆ ಸೂಚನೆ ನೀಡಲಾಗಿದೆ. ಖಾಸಗಿ ಬೋರ್‌ವೆಲ್ ಮೂಲಕ ನೀರು ಒದಗಿಸಲು ಬೋರ್‌ವೆಲ್ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಂಡು, ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು. ಶುದ್ಧ ಕುಡಿಯುವ ನೀರಿನ ಘಟಕ ಚಾಲನೆಯಲ್ಲಿರುವಂತೆ ನೋಡಿಕೊಳ್ಳಲು ಸೂಚಿಸಿದರು.



ಮೇ 7ರಂದು ನಡೆಯುವ ಲೋಕಸಭಾ ಚುನಾವಣೆಗೆ ಮತದಾನ ದಿನಾಂಕ ನಿಗದಿಪಡಿಸಲಾಗಿದೆ. ಆದ್ದರಿಂದ ಮತಗಟ್ಟೆಗಳಲ್ಲಿ ನೀರಿನ ಸಂಪರ್ಕ, ವಿದ್ಯುತ್, ಶೌಚಾಲಯ ಸೇರಿದಂತೆ ಅಗತ್ಯ ಮೂಲ ಸೌಕರ್ಯ ಒದಗಿಸುವಂತೆ ತಿಳಿಸಿದರು. ತಹಸೀಲ್ದಾರ್ ವಾಸುದೇವ ಸ್ವಾಮಿ ಮಾತನಾಡಿ, ಮಳೆ, ಗಾಳಿ, ಗುಡುಗು, ಸಿಡಿಲು ಹಾಗೂ ಪ್ರಕೃತಿ ವಿಕೋಪದಿಂದ ಉಂಟಾಗುವ ಪ್ರಾಣಹಾನಿ ತಪ್ಪಿಸಲು ಮುನ್ನೆಚ್ಚರಿಕೆಯಾಗಿ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವಂತೆ ತಿಳಿಸಿದರು. ಮನೆಗಳಲ್ಲಿ ಮತದಾನ ಪ್ರಕ್ರಿಯೆ ಶುಕ್ರವಾರದಿಂದ ಆರಂಭವಾಗಲಿದೆ. ಸಂಬಂಧಿಸಿದ ಸಿಬ್ಬಂದಿಗೆ ಅಗತ್ಯ ಸಹಕಾರ ನೀಡುವಂತೆ ಸೂಚಿಸಿದರು.

ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಕೃಷ್ಣಪ್ಪ ಧರ್ಮರ ಮಾತನಾಡಿ, ಮುಂದಿನ ಕೆಲ ದಿನಗಳಲ್ಲಿ ಕುಡಿಯುವ ನೀರಿನ ತೊಂದರೆ ಉಂಟಾಗುವ ಸಾಧ್ಯತೆ ಹೆಚ್ಚಿದೆ. ಎಲ್ಲ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು. ಖಾಸಗಿ ಬೋರ್‌ವೆಲ್ ಮಾಲೀಕರೊಂದಿಗೆ ಸಭೆ ಮಾಡಿ ಒಪ್ಪಂದ ಪತ್ರಗಳನ್ನು ಮಾಡಿಕೊಳ್ಳಬೇಕು. ಮುಂದಿನ ಸಭೆಗೆ ಆಗಮಿಸುವಾಗ ಅದರ ಪ್ರತಿಗಳನ್ನು ತರಬೇಕು ಎಂದು ಸೂಚಿಸಿದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ತಾಲೂಕು ವ್ಯಾಪ್ತಿಯ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಆಡಳಿತಾಧಿಕಾರಿಗಳು, ತೋಟಗಾರಿಕೆ, ಪಶುಪಾಲನೆ, ಅರಣ್ಯ ಮತ್ತು ಕುಡಿಯುವ ನೀರು ಪೂರೈಕೆ ತಾಲೂಕು ಮಟ್ಟದ ಅಧಿಕಾರಿಗಳು, ತಾಲೂಕು ಪಂಚಾಯಿತಿ ಸಿಬ್ಬಂದಿಗಳು ಹಾಜರಿದ್ದರು.

### ರಾಮ ಮಂದಿರ, ಸಿಖ್ಖರ ಉಲ್ಲೇಖ ನೀತಿ ಸಂಹಿತೆ ಉಲ್ಲಂಘನೆಯಾಗದು: ಪ್ರಧಾನಿ ಮೋದಿಗೆ ಕ್ಲೀನ್ ಚಿಟ್ ನೀಡಲು ಮುಂದಾದ ಚು.ಆಯೋಗ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ



ರಾಮ ಮಂದಿರ ನಿರ್ಮಾಣ, ಸಿಖ್ ತೀರ್ಥಯಾತ್ರೆಯ ಹಾದಿಯಾದ ಕರ್ತಾರ್ ಪುರ್ ಸಾಹಿಬ್ ಕಾರಿಡಾರ್ ಅಭಿವೃದ್ಧಿ, ಸಿಖರ ಪವಿತ್ರ ಗ್ರಂಥವಾದ ಗುರು ಗ್ರಂಥ ಸಾಹಿಬ್ ಪ್ರತಿಗಳನ್ನು ಅಫ್ಘಾನಿಸ್ತಾನದಿಂದ ವಾಪಸ್ ತರಲು ಸರ್ಕಾರದ ಕ್ರಮ ಕೈಗೊಂಡಿರುವುದನ್ನು ಉಲ್ಲೇಖಿಸಿ ಪ್ರಧಾನಿ ಮೋದಿ ಭಾಷಣ ಮಾಡಿರುವುದು ನೀತಿ ಸಂಹಿತೆಯ ಉಲ್ಲಂಘನೆಯಾಗದು ಎಂಬ ತನ್ನ ನಿರ್ಧಾರವನ್ನು ಶೀಘ್ರದಲ್ಲೇ ಚುನಾವಣಾ ಆಯೋಗ ಪ್ರಕಟಿಸುವ ಸಾಧ್ಯತೆ ಇದೆ ಎಂದು ದಿ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ.

ಪ್ರಧಾನಿ ಮೋದಿ ಭಾಷಣದಲ್ಲಿ ಧಾರ್ಮಿಕ ವಿಚಾರಗಳನ್ನು ತರುವ ಮೂಲಕ ನೀತಿ ಸಂಹಿತೆ ಉಲ್ಲಂಘಿಸಿದ್ದಾರೆ ಎಂದು ಸುಪ್ರೀಂ ಕೋರ್ಟ್ ವಕೀಲ ಆನಂದ್ ಎಸ್ ಜೊಂಡಲೆ ಅವರು ನೀಡಿರುವ ದೂರನ್ನು ಚುನಾವಣಾ ಆಯೋಗ ವಿಲೇವಾರಿ ಮಾಡುವ ಸಾಧ್ಯತೆಯಿದೆ(ತಿರಸ್ಕರಿಸುವ) ಎಂದು ವರದಿ ತಿಳಿಸಿದೆ.

ಏಪ್ರಿಲ್ 9 ರಂದು ಉತ್ತರ ಪ್ರದೇಶದ ಪಿಲಿಭಿತ್‌ನಲ್ಲಿ ಸಾರ್ವಜನಿಕ ರ್‍ಯಾಲಿಯಲ್ಲಿ ಭಾಷಣ ಮಾಡಿದ್ದ ಪ್ರಧಾನಿ ಮೋದಿಯವರು "ಹಿಂದೂ ದೇವರುಗಳು, ಹಿಂದೂ ಪೂಜಾ ಸ್ಥಳಗಳು, ಸಿಖ್ ದೇವರುಗಳು, ಸಿಖ್ ಆರಾಧನಾ ಸ್ಥಳಗಳ ಹೆಸರಿನಲ್ಲಿ ತಮ್ಮ ಪಕ್ಷಕ್ಕೆ ಮತ ಕೇಳುವ ಮೂಲಕ ನೀತಿ ಸಂಹಿತೆಯನ್ನು ಉಲ್ಲಂಘಿಸಿದ್ದಾರೆ ಎಂದು ದೂರುದಾರರು ಆರೋಪಿಸಿದ್ದರು.

# ಮೋದಿಗೆ ಕರ್ನಾಟಕದ ಜನರ ಮತ ಕೇಳುವ ನೈತಿಕತೆ ಇಲ್ಲ

▶▶ ಮೊದಲನೇ ಪುಟದಿಂದ

ಕೇಂದ್ರದ ಬಿಜೆಪಿ ಸರಕಾರ ಪರಿಸರ ನಿರಪೇಕ್ಷಣಾ ದೊರಕಿಸಿಕೊಟ್ಟರೆ ನಾಳೆಯೇ ಕೆಲಸ ಆರಂಭಿಸಲಾಗುವುದು. ಅದಕ್ಕಾಗಿ ಈಗಾಗಲೇ ಟೆಂಡರ್ ಸಹ ಕರೆದಿದ್ದೇವೆ ಎಂದರು.

ಕಾಂಗ್ರೆಸ್ ಜಿಲ್ಲಾಧ್ಯಕ್ಷ, ರೋಣ ಶಾಸಕ ಜಿ.ಎಸ್. ಪಾಟೀಲ ಅಧ್ಯಕ್ಷತೆ ವಹಿಸಿದ್ದರು. ಸಮಾರಂಭದಲ್ಲಿ ಕಾನೂನು ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವ ಎಚ್.ಕೆ. ಪಾಟೀಲ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯ-ರೆಡ್ಡಿ, ಸರಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್, ಹಾವೇರಿ-ಗದಗ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ, ಆರ್.ಎಸ್. ಪಾಟೀಲ, ಶಾಸಕರಾದ ಶ್ರೀನಿವಾಸ ಮಾನೆ, ಆರ್. ಶಂಕರ್, ಯು.ಬಿ. ಬಣಕಾರ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ರಾಮಕೃಷ್ಣ ದೊಡ್ಡಮನಿ, ರಾಮಣ್ಣ ಲಮಾಣಿ ಸೇರಿದಂತೆ ಮುಖಂಡರು ಉಪಸ್ಥಿತರಿದ್ದರು.

### ಬಸವರಾಜ ಬೊಮ್ಮಾಯಿಯವರ ಚುನಾವಣಾ ಪ್ರಚಾರ ಸಭೆಯಲ್ಲಿ ಕಳಕಪ್ಪ ಬಂಡಿ

# ರಾಜ್ಯ ಸರ್ಕಾರದಿಂದ ಉದಾಸೀನ ಧೋರಣೆ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನೇಹಾ ಹಿರೇಮಠ ಹತ್ಯೆ ಪ್ರಕರಣದಲ್ಲಿ ರಾಜ್ಯ ಸರಕಾರ ನಡೆದುಕೊಂಡ ಉದಾಸೀನ ಧೋರಣೆ ಎಲ್ಲರಿಗೂ ನೋವು ತರಿಸಿದೆ. ಬಿಜೆಪಿ ಅಧಿಕಾರಕ್ಕೆ ಬಂದರೆ ಅಲ್ಪ ಸಂಖ್ಯಾತರನ್ನೆಲ್ಲ ದೇಶ ಬಿಟ್ಟು ಕಳಿಸಲಾಗುತ್ತಿದೆ ಎನ್ನುವ ಪುಕಾರನ್ನು ಕಾಂಗ್ರೆಸ್ ಹಬ್ಬಿಸುತ್ತಿದೆ. ಅಲ್ಪ ಸಂಖ್ಯಾತರಿಗೆ ಬದುಕಿ ಬಾಳಲು ಅತ್ಯಂತ ಸುರಕ್ಷಿತ ದೇಶವೆಂದರೆ ಅದು ಭಾರತ ಮಾತ್ರ. ನೀವೇನಾದರೂ ಕಾಂಗ್ರೆಸ್‌ನ ಗ್ಯಾರಂಟಿಗಳಿಗೆ ಮತ ನೀಡಲು ಮುಂದಾದರೆ ನಿಮಗೆ ಸಂಕಷ್ಟಗಳು ಕಟ್ಟಿಟ್ಟ ಬುತ್ತಿ ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಆರೋಪಿಸಿದರು.

ಬುಧವಾರ ನರೇಗಲ್ಲದಲ್ಲಿ ಹಾವೇರಿ-ಗದಗ ಲೋಕಸಭಾ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಜೆಡಿಎಸ್ ನಾಯಕ ಬಂಡೆಪ್ಪ ಕಾಶೆಂಪೂರ ಮಾತನಾಡಿ, ಅಕ್ಷಯ ಪಾತ್ರೆ ನೀಡಿರುವ ಮೋದಿಯವರ ಬಗ್ಗೆ ಕಾಂಗ್ರೆಸ್‌ನವರು ಚೊಂಬು ನೀಡಿದ್ದಾರೆ ಎಂಬ ಆರೋಪ ಮಾಡುತ್ತಿದ್ದಾರೆ. ಈ ಹುರುಳಿಲ್ಲದ ಆರೋಪದಿಂದ ಅವರ ಕೈಗೆ ಚೊಂಬು ಸಿಗಲಿದೆ. ಹಾಗಾಗಲು ನೀವೆಲ್ಲರೂ ಸ್ವಯಂ ಪ್ರೇರಣೆಯಿಂದ ಬೊಮ್ಮಾಯಿಯವರಿಗೆ ಮತದಾನ ಮಾಡಬೇಕೆಂದರು.

ಕಾಂಗ್ರೆಸ್ ಸರಕಾರ ನೀಡಿರುವ ಐದು ಗ್ಯಾರಂಟಿಗಳಲ್ಲಿ ಒಂದುದ ಗ್ಯಾರಂಟಿಯೂ ರೈತರ ಬಗ್ಗೆ ಇಲ್ಲದಿರುವುದು ಇದು ರೈತ ವಿರೋಧಿ ಸರಕಾರ ಎಂಬುದನ್ನು ಸ್ಪಷ್ಟಪಡಿಸುತ್ತದೆ. ಲೋಕಸಭಾ ಚುನಾವಣೆಯ ನಂತರ ಈ ಸರಕಾರ ಬಹಳಷ್ಟು ದಿನಗಳು ಬಾಳುವುದಿಲ್ಲ. ನೀವು ಮತ್ತೆ ಶಾಸಕರಾಗಲು ಸಿದ್ಧರಾಗಿ ಎಂದು ಬಂಡಿಯವರಿಗೆ ಕಾಶೆಂಪೂರ ಸಲಹೆ ನೀಡಿದರು.

ಸಭೆಯನ್ನುದ್ದೇಶಿಸಿ ಕುಷ್ಟಗಿ ಶಾಸಕ ದೊಡ್ಡನಗೌಡ ಪಾಟೀಲ, ಮುಖಂಡರಾದ ಉಮೇಶ ಸಂಗನಾಳಮಠ, ಶಶಿಧರ ಸಂಕನಗೌಡ್ರ, ನ್ಯಾಯವಾದಿ ಎಂ.ಬಿ. ಸಜ್ಜನರ, ಮುತ್ತಣ್ಣ ಕಡಗದ ಮಾತನಾಡಿದರು. ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾಜಿ ಸಚಿವ ಕಳಕಪ್ಪ ಬಂಡಿ, ಜಿ.ಬಿ. ಪಾಟೀಲ, ಅಶೋಕ ನವಲಗುಂದ, ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ಎಫ್. ಮುಧೋಳ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

### ಹುಲಕೋಟಿ ಕೃಷಿ ವಿಜ್ಞಾನ ಕೇಂದ್ರದಲ್ಲಿ ತರಬೇತಿ ಕಾರ್ಯಕ್ರಮ

# ರೈತರು ನೀರನ್ನು ಸೂಕ್ತವಾಗಿ ನಿರ್ವಹಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಹುಲಕೋಟಿಯ ಐ.ಸಿ.ಎ.ಆರ್‌ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ ಹಾಗೂ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ಐ.ಸಿ.ಎ.ಆರ್, ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರದಲ್ಲಿ ಇಂಧನ ಸಾಮರ್ಥ್ಯ ಪಂಪ್‌ಸೆಟ್‌ಗಳು ಹಾಗೂ ನೀರು ಸಂರಕ್ಷಣೆ ಕುರಿತು ಒಂದು ದಿನದ ಜಾಗೃತಿ ಮತ್ತು ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.



ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರಾದ ಡಾ. ಸುಧಾ ವ್ಹಿ.ಮಂಕಣಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ನೀರಾವರಿ ಇರುವ ರೈತರು ನೀರನ್ನು ಪೋಲು ಮಾಡದೇ ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡಬೇಕು ಹಾಗೂ ನೀರಾವರಿಗೆ ಹೆಚ್ಚು ದಕ್ಷತೆ ಉಳ್ಳ ವಿದ್ಯುತ್ ಪಂಪುಗಳನ್ನು ಅಳವಡಿಸಬೇಕು ಎಂದು ಕರೆ ನೀಡಿದರು.

ಎನ್.ಎಚ್ ಭಂಡಿ ಮಾತನಾಡಿ, ಮಣ್ಣು ಮತ್ತು ನೀರು ಬಹು ಅಮೂಲ್ಯವಾದ ನೈಸರ್ಗಿಕ ಸಂಪನ್ಮೂಲಗಳಾಗಿದ್ದು, ರೈತರು ಇವೆರಡೂ ಸಂಪನ್ಮೂಲಗಳನ್ನು ಕಾಪಾಡಿಕೊಂಡು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ನರಗುಂದ ತಾಲೂಕಿನ ಖಾನಾಪುರ ಗ್ರಾಮದ ಪ್ರಗತಿಪರ ರೈತರಾದ ನಾಗನಗೌಡ ಕಗದಾಳ ಅತಿಥಿಗಳಾಗಿ ಭಾಗವಹಿಸಿದ್ದರು.

ಡಾ. ವಿನಾಯಕ ನಿರಂಜನ್ ಸ್ವಾಗತಿಸಿ ನಿರೂಪಿಸಿದರು. ಹೇಮಾವತಿ ಹಿರೇಗೌಡರ್ ವಂದಿಸಿದರು. ವಿಜ್ಞಾನಿಗಳಾದ ಡಾ. ವಿನಾಯಕ ನಿರಂಜನ್, ಎನ್.ಎಚ್. ಭಂಡಿ ಹಾಗೂ ಹೇಮಾವತಿ ಹಿರೇಗೌಡರ್ ತರಬೇತಿಗೆ ಸಂಬಂಧಿಸಿದಂತೆ ವಿವಿಧ ವಿಷಯಗಳನ್ನು ಮಂಡಿಸಿದರು. ನಾಗನಗೌಡ ಕಗದಾಳ ತಮ್ಮ ಕೃಷಿ ಅನುಭವವನ್ನು ರೈತರೊಂದಿಗೆ ಹಂಚಿಕೊಂಡರು. ತರಬೇತಿ ಕಾರ್ಯಕ್ರಮದಲ್ಲಿ 58ಕ್ಕೂ ಹೆಚ್ಚು ರೈತರು, ರೈತ ಮಹಿಳೆಯರು ಹಾಗೂ ಪಂಪ್‌ಸೆಟ್ ತಂತ್ರಜ್ಞರು ಭಾಗವಹಿಸಿದ್ದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕೃಷಿ ಇಂಜಿನಿಯರಿಂಗ್ ವಿಭಾಗದ ವಿಜ್ಞಾನಿ ಡಾ. ವಿನಾಯಕ ನಿರಂಜನ್, ರೈತರಿಗೆ ತರಬೇತಿ ಕಾರ್ಯಕ್ರಮದ ಧ್ಯೇಯೋದ್ದೇಶಗಳನ್ನು ತಿಳಿಸಿದರು. ಕಾರ್ಯಕ್ರಮದಲ್ಲಿ ಅತಿಥಿಯಾಗಿ ಭಾಗವಹಿಸಿದ ಕೋರಮಂಡಲ್ ಇಂಟರ್‌ನ್ಯಾಶನಲ್ ಲಿಮಿಟೆಡ್‌ನ ವಿದ್ಯಾಸಾಗರ, ಮಣ್ಣಿನ ಆರೋಗ್ಯ ಕಾಪಾಡಲು ಮಣ್ಣಿನ ಪೋಷಕಾಂಶಗಳ ಪರೀಕ್ಷೆ ಮಾಡಿಸಿ ಅದರ ಅನುಗುಣವಾಗಿ ಗೊಬ್ಬರಗಳನ್ನು ಬಳಸಬೇಕು ಎಂದು ಅಭಿಪ್ರಾಯಪಟ್ಟರು.

### ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಪರ ಪಂಚಮಸಾಲಿ ಸಮಾಜ ಬಾಂಧವರ ಸಭೆ

# ಕಾಂಗ್ರೆಸ್ ಅಭ್ಯರ್ಥಿಯನ್ನು ಗೆಲ್ಲಿಸೋಣ

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸಮಾಜವು ಕಾಂಗ್ರೆಸ್ ಪಕ್ಷದ ಪರವಾಗಿ ಇದೆ ಅನ್ನುವುದಕ್ಕೆ ನಾನೇ ಸಾಕ್ಷಿ. ನನ್ನನು ಕಾಂಗ್ರೆಸ್ ಪಕ್ಷದ ಕಾರ್ಯಾಧ್ಯಕ್ಷನನ್ನಾಗಿ ಮಾಡಿದೆ. ಉನ್ನತ ಹುದ್ದೆ ನೀಡಿ ನಮ್ಮ ಸಮಾಜಕ್ಕೆ ಶಕ್ತಿ ತುಂಬಿದೆ. ಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸಲು ಶಕ್ತಿ ತುಂಬೋಣ. ನಿಮ್ಮ ಹಿಂದೆ ನಾನು ಯಾವಾಗಲೂ ಇರುತ್ತೇನೆ ಎಂದು ಧಾರವಾಡ ಗ್ರಾಮೀಣ ಶಾಸಕ ವಿನಯ್ ಕುಲಕರ್ಣಿ ಹೇಳಿದರು.



ಜಿಲ್ಲಾ ಕಾಂಗ್ರೆಸ್ ಬೆಂಬಲಿತ ಪಂಚಮಸಾಲಿ ಸಮಾಜದ ವತಿಯಿಂದ ಗುರುವಾರ ಗದಗ ನಗರದ ಎಪಿಎಮ್‌ಸಿಯಲ್ಲಿ ಸಿದ್ದನಗೌಡ ಪಾಟೀಲರ ವಕಾರದಲ್ಲಿ ಹಮ್ಮಿಕೊಂಡಿದ್ದ ಸಮಾಜ ಬಾಂಧವರ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಅನಿಲಕುಮಾರ ಪಾಟೀಲ್ ಪ್ರಾಸ್ತವಿಕವಾಗಿ ಮಾತನಾಡಿ, ನಮ್ಮ ಸಮಾಜವು ಗದಗ ಜಿಲ್ಲೆಯಲ್ಲಿ ಯಾವಾಗಲೂ ಕಾಂಗ್ರೆಸ್ ಪಕ್ಷದ ಪರವಾಗಿ ಇದೆ ಅನ್ನುವುದಕ್ಕೆ ಈ ಸಭೆಯೇ ಸಾಕ್ಷಿಯಾಗಿದೆ. ನಾವೆಲ್ಲರೂ ಸೇರಿ ಹಾವೇರಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಅವರ ಗೆಲ್ಲುವಿನಲ್ಲಿ ಸಕ್ರಿಯವಾಗಿ ದುಡಿಯೋಣ ಎಂದರು.

ಕಾರ್ಯಕ್ರಮದಲ್ಲಿ ಎಪಿಎಂ ಬ್ಯಾಂಕ್ ನಿರ್ದೇಶಕ ಮಲ್ಲಪ್ಪ ಕಲಗುಡಿ, ಬಸವರಾಜ್ ಮನಗುಂಡಿ, ಚೆನ್ನವೀರ ಮಳಗಿ, ಸಿ.ಕೆ. ಮಾಳಶೆಟ್ಟಿ, ಕೊಟ್ರಗೌಡ ಪಾಟೀಲ, ಬಸವರಾಜ್ ದೇಸಾಯಿ, ಎಸ್.ವಿ. ಕೋಟಗಿ, ಮೋಹನ್ ಕಮತರ, ಕಿರಣ್ ಕಮತರ, ಶರಣಪ್ಪ ಗೋಳಗೋಳಕಿ, ಶರಣು ಬೋಳನವರ, ಲಲಿತಾ ಗೋಳಗೋಳಕಿ, ರುದ್ರಮ್ಮ ಕೆರಕಲಮಟ್ಟಿ, ಲಕ್ಷ್ಮೀ ದ್ಯಾಪನಗೌಡ್ರು, ಶಿವಪ್ಪ ಮುಳುಗುಂದ, ಬುದಪ್ಪ ಅಂಗಡಿ, ಅಶೋಕ್ ಶಿರಹಟ್ಟಿ, ಮುತ್ತು ಮುಳವಾಡ, ರಮೇಶ ರೋಣದ, ಸಂತೋಷ್ ಗುಡ್ಡದ, ಸಂಗಮೇಶ್ ಕವಳಿಕಾಯಿ ಮುಂತಾದವರಿದ್ದರು.

ಮುಂಡರಗಿ ತಾಲೂಕಿನ ಹಿರಿಯರಾದ ಕೊಟ್ರಗೌಡ ಪಾಟೀಲ್ ಮಾತನಾಡಿ, ಬರುವ ಲೋಕಸಭಾ ಚುನಾವಣೆಯಲ್ಲಿ ನಾವೆಲ್ಲರೂ ಕಾಂಗ್ರೆಸ್ ಅಭ್ಯರ್ಥಿಯನ್ನು ಬೆಂಬಲಿಸಲು ಸನ್ನದ್ಧರಾಗೋಣ ಎಂದರು. ವಜಿಲ್ಲಾ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ನೀಲಮ್ಮ ಬೋಳನವರ ಮಾತನಾಡಿ, ಕಾಂಗ್ರೆಸ್ ಪಕ್ಷವು ನಮ್ಮ ಸಮಾಜದ ಮಹಿಳೆಯರಿಗೆ ಹಲವಾರು ಅವಕಾಶಗಳನ್ನು ನೀಡಿದೆ. ಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯನ್ನು ಗೆಲ್ಲಿಸೋಣ ಎಂದರು.

### ಗ್ಯಾರಂಟಿ ಕಾರ್ಡ್ ಹಂಚದಂತೆ ಚುನಾವಣಾ ಆಯೋಗ ತಡೆ ನೀಡಿದೆ-ಬಸವರಾಜ ಬೊಮ್ಮಾಯಿ

# ಮಹಿಳೆಯರು ಸುರಕ್ಷಿತವಾಗಿ ಮನೆಗೆ ಬರಬೇಕೆಂದರೆ ಬಿಜೆಪಿಗೆ ಮತ ಹಾಕಿ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ನಿಮ್ಮ ಮನೆಯ ಹೆಣ್ಣು ಮಕ್ಕಳು ಸುರಕ್ಷಿತವಾಗಿ ಮನೆಗೆ ಬರಬೇಕೆಂದರೆ ಬಿಜೆಪಿಗೆ ಮತ ಹಾಕಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಹಾವೇರಿ ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ಅವರು ಬ್ಯಾಡಗಿ ವಿಧಾನಸಭಾ ಕ್ಷೇತ್ರದ ಹಿರೇ ಅಣಜಿ, ಸೂಡಂಬಿ, ಗಾಳಪೂಜಿ, ಹಿರೇಹಳ್ಳಿ ಗ್ರಾಮದಲ್ಲಿ ರೋಡ್ ಶೋ ಮೂಲಕ ಮತ ಯಾಚನೆ ಮಾಡಿ, ಇದು ದೇಶದ ಭವಿಷ್ಯ ನಿರ್ಧರಿಸುವ ಚುನಾವಣೆ ನಮ್ಮ ತಾಯಂದಿರು, ಹೆಣ್ಣು ಮಕ್ಕಳು ಸುರಕ್ಷಿತವಾಗಿ ಮನೆಗೆ ಬರಲು ಬಿಜೆಪಿಗೆ ಮತ ಹಾಕಿ. ಅವರು ಆತಂಕದಲ್ಲಿಯೇ ಇರಬೇಕೆಂದರೆ ಕಾಂಗ್ರೆಸ್ ಗೆ ಮತ ಹಾಕಿ ಎಂದರು.

ರೈತರ ಕಿಸಾನ್ ಸಮ್ಮಾನ ಯೋಜನೆ ಮುಂದುವರೆಯಬೇಕೆಂದರೆ ಬಿಜೆಪಿಗೆ ಹಾಕಿ, ರೈತ ವಿದ್ಯಾನಿಧಿ ಯೋಜನೆ ಮತ್ತೆ ಬರಬೇಕು ಎಂದರೆ ಬಿಜೆಪಿಗೆ ಮತ ಹಾಕಿ,



ಕೋವಿಡ್ ಸಂದರ್ಭದಲ್ಲಿ ಮೋದಿಯವರು ಲಸಿಕೆ ಹಾಕಿಸಿ ಜೀವ ಉಳಿಸಿದ್ದಾರೆ. ಕೊರೊನಾ ಸಂದರ್ಭದಲ್ಲಿ ಹತ್ತು ಕೆಜಿ ಅಕ್ಕಿ ಕೊಟ್ಟರು. ಈಗಲೂ ಮೋದಿಯವರು ಐದು ಕೆಜಿ ಕೊಡುತ್ತಿದ್ದಾರೆ. ಮೋದಿಯವರ ಅಕ್ಕಿ, ಕಾಂಗ್ರೆಸ್ ಭಾಗ್ಯ ಎಂದು ಹೇಳಿಕೊಳ್ಳುತ್ತಿದೆ. ರೈತರ ಪಂಪ್ ಸೆಟ್ ಗಳಿಗೆ ಟಿಸಿಗಳನ್ನು ನಮ್ಮ ಅವಧಿಯಲ್ಲಿ 25. ಸಾವಿರಕ್ಕೆ ಕೊಡುತ್ತಿದ್ದೇವು. ಈಗ ಎರಡೂವರೆ ಲಕ್ಷ ರೂ. ಹಾಕುತ್ತಿದ್ದಾರೆ ಎಂದರು.

ಕಾಂಗ್ರೆಸ್ ಹೊಸದಾಗಿ ಗ್ಯಾರಂಟಿ ಕಾರ್ಡ್ ಗಳನ್ನು ಹಂಚುತ್ತಿದ್ದಾರೆ. ಗ್ಯಾರಂಟಿ ಕಾರ್ಡ್ ಹಂಚದಂತೆ ಚುನಾವಣಾ ಆಯೋಗದ ಆದೇಶ ಆಗಿದೆ. ಇನ್ನು ಮುಂದೆ ಅವರು ಗ್ಯಾರಂಟಿ ಕಾರ್ಡ್ ಹಂಚುವಂತಿಲ್ಲ. ಗ್ಯಾರಂಟಿ ಕಾರ್ಡ್ ಗಳನ್ನು ಹಂಚಲು ಬಂದರೆ, ಅದನ್ನು ತಡೆದು ಆಯೋಗಕ್ಕೆ ದೂರು ನೀಡಿ, ಅನಿಷ್ಟ ಕಾಂಗ್ರೆಸ್ ಸರ್ಕಾರಕ್ಕೆ ತಕ್ಕ ಪಾಠ ಕಲಿಸಿ, ಒಂದೇ ವರ್ಷದಲ್ಲಿ ಮತ್ತೆ ಚುನಾವಣೆ ವಿಧಾನಸಭೆಗೆ ಚುನಾವಣೆ ನಡೆಯಲಿದೆ. ವಿರೂಪಾಕ್ಷಪ್ಪ ಬಳ್ಳಾರಿ ಮತ್ತೆ ಶಾಸಕರಾಗಿ ಆಯ್ಕೆಯಾಗಲಿದ್ದಾರೆ ಎಂದರು. ನಿಮ್ಮ ಉತ್ಸಾಹ ನೋಡಿ ನನಗೆ ಶಕ್ತಿ ಬಂದಿದೆ. ಸಂಸತ್ತಿನಲ್ಲಿ ನಿಮ್ಮ ಧ್ವನಿಯಾಗಿ ಕೆಲಸ ಮಾಡುತ್ತೇನೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ವಿರೂಪಾಕ್ಷಪ್ಪ ಬಳ್ಳಾರಿ ಹಾಜರಿದ್ದರು.

> ಕಾಂಗ್ರೆಸ್ ನವರು ಹೊಸ ಕಾಯ್ದೆ ತರುತ್ತಿದ್ದು, ನಾವು ನಮ್ಮ ಪಿತ್ರಾರ್ಜಿತ ಆಸ್ತಿಯನ್ನು ಪಡೆಯಬೇಕಾದರೆ, ನಾವು ಶೇ 55% ರಷ್ಟು ತೆರಿಗೆ ಕಟ್ಟಬೇಕು. ಇಲ್ಲದಿದ್ದರೆ ಆಸ್ತಿ ಬಿಟ್ಟು ಕೊಡಬೇಕು. ಈ ರೀತಿಯ ಕಾನೂನು ತರುವುದಾಗಿ ರಾಹುಲ್ ಗಾಂಧಿ ಹೇಳಿದ್ದಾರೆ. ಕಾಂಗ್ರೆಸ್ ಗೆ ಮತ ಹಾಕಿದರೆ, ಆಸ್ತಿ ಹಂಚಿಕೆ ಕಾಯ್ದೆ ಜಾರಿಗೆ ತರುತ್ತಾರೆ. ಇದರ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಈ ಕಾಯ್ದೆ ಬಂದರೆ ದೇಶದಲ್ಲಿ ಕ್ಷೋಭೆ ಉಂಟಾಗಲಿದೆ ಎಂದು ಹೇಳಿದರು.
>
> **- ಬಸವರಾಜ್ ಬೊಮ್ಮಾಯಿ,** ಬಿಜೆಪಿ ಅಭ್ಯರ್ಥಿ

# ದೇಶದ ಸುರಕ್ಷತೆಗೆ ಎಲ್ಲರೂ ಬದ್ಧರಾಗಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರಧಾನಿ ಮೋದಿ ಭ್ರಷ್ಟಾಚಾರಿಗಳಿಗೆ, ಭಯೋತ್ಪಾದಕರಿಗೆ ನಿಜಕ್ಕೂ ಶನಿಯಾಗಿದ್ದಾರೆ. ಕಾಂಗ್ರೆಸ್ ಆಡಳಿತದಲ್ಲಿ 11ನೇ ಸ್ಥಾನದಲ್ಲಿದ್ದ ದೇಶದ ಆರ್ಥಿಕತೆಯನ್ನು 5ನೇ ಸ್ಥಾನಕ್ಕೆ ತಂದು ನಿಲ್ಲಿಸಿದ ಕೀರ್ತಿ ಪ್ರಧಾನಿ ಮೋದಿಯವರಿಗೆ ಸಲ್ಲುತ್ತದೆ. ದೇಶವನ್ನು ಮುನ್ನಡೆಸಲು ಸಮರ್ಥ ನಾಯಕರೊಬ್ಬರು ಬೇಕು. ಕಳೆದ ಹತ್ತು ವರ್ಷಗಳಲ್ಲಿ ಇಡೀ ಜಗತ್ತೇ ಭಾರತದೆಡೆಗೆ ತಿರುಗಿ ನೋಡುವಂತೆ ಮಾಡಿರುವ ಮೋದಿ ಅಂತಹ ಸಮರ್ಥ ನಾಯಕರಾಗಿದ್ದಾರೆ. ಅವರನ್ನು ಮತ್ತೊಮ್ಮೆ ಪ್ರಧಾನಿ ಮಾಡಿ ದೇಶದ ಸುರಕ್ಷತೆಗೆ ತಾವೆಲ್ಲರೂ ಬದ್ಧರಾಗಲು ಬಿಜೆಪಿಯನ್ನು ಬೆಂಬಲಿಸಬೇಕೆಂದು ಬಸವರಾಜ ಬೊಮ್ಮಾಯಿ ಮನವಿ ಮಾಡಿದರು.

ಪಟ್ಟಣದ ಕೊಂತಿ ಮಲ್ಲಪ್ಪನ ಎದುರಿಗಿನ ಮಾಜಿ ಗೌಡರ ಬಯಲಿನಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಅವರು ಮಾತನಾಡಿದರು.

ಜನಾಂಗಗಳ ನಡುವೆ ಬೆಂಕಿ ಹಚ್ಚಿ ತಮ್ಮ ರೊಟ್ಟಿ ಸುಟ್ಟುಕೊಳ್ಳುವ ಕಾಂಗ್ರೆಸ್ಸಿಗರ ಆಟ ಈ ಚುನಾವಣೆಯಲ್ಲಿ ಏನೂ ನಡೆಯದು. ಕ್ಷೇತ್ರದಲ್ಲಿ ಎಲ್ಲ ಕಡೆಗಳಲ್ಲಿಯೂ ಬಿಜೆಪಿಗೆ ಸ್ಪಷ್ಟ ಬಹುಮತ ಎದ್ದು ಕಾಣುತ್ತಿದೆ. ಅಲ್ಲದೆ ಬಿಜೆಪಿ-ಜೆಡಿಎಸ್ ಮೈತ್ರಿಯಿಂದ ರಾಜ್ಯದ ಎಲ್ಲ 28 ಕ್ಷೇತ್ರಗಳಲ್ಲಿಯೂ ಎನ್‌ಡಿಎ ಗೆಲುವು ಸಾಧಿಸಲಿದೆ ಎಂದು ಬೊಮ್ಮಾಯಿ ಭವಿಷ್ಯ ನುಡಿದರು.

ವೇದಿಕೆಯ ಮೇಲೆ ಮಾಜಿ ಸಚಿವ ಕೆ.ಜಿ. ಬಂಡಿ, ಕುಷ್ಟಗಿಯ ಶಾಸಕ ದೊಡ್ಡನಗೌಡ ಪಾಟೀಲ, ಜೆಡಿಎಸ್ ಮುಖಂಡ ಬಂಡೆಪ್ಪ ಕಾಶೆಂಪೂರ, ನ್ಯಾಯವಾದಿ ಎಂ.ಬಿ. ಸಜ್ಜನರ, ಜಿ.ಬಿ. ಪಾಟೀಲ, ಅಶೋಕ ನವಲಗುಂದ, ಜೆಡಿಎಸ್ ಜಿಲ್ಲಾಧ್ಯಕ್ಷ ಎಂ.ಎಫ್. ಮುಧೋಳ, ರೋಣ ಮಂಡಳ ಬಿಜೆಪಿ ಅಧ್ಯಕ್ಷ ಮುತ್ತಣ್ಣ ಕಡಗದ, ರುದ್ರಣ್ಣ ಗುಳಗುಳಿ, ಸ್ಥಳೀಯ ಮುಖಂಡರಾದ ಉಮೇಶ ಸಂಗನಾಳಮಠ, ಶಶಿಧರ ಸಂಕನಗೌಡ್ರ, ಬಸವರಾಜ ಕೊಟಗಿ, ಆರ್.ಜಿ. ಪಾಟೀಲ, ಬಸನಗೌಡ ಪೊಲೀಸ್‌ಪಾಟೀಲ, ಪ್ರಕಾಶ ಹಕ್ಕಿ, ಮಹೇಶ ಶಿವಶಿಂಪ್ರ, ರಾಜಶೇಖರಗೌಡ ಪಾಟೀಲ ಮುಂತಾದವರಿದ್ದರು.

## ನಿಷೇಧಿತ ಪ್ಲಾಸ್ಟಿಕ್ ವಶಕ್ಕೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯಲ್ಲಿ ಹಾತಲಗೇರಿ ನಾಕಾ ಹತ್ತಿರದ ವಾಣಿಜ್ಯ ಮಳಿಗೆಗಳಿಂದ ಅನಧಿಕೃತವಾಗಿ ಮಾರಾಟ ಮಾಡುತ್ತಿದ್ದ ಅಂದಾಜು 200 ಕೆ.ಜಿ ನಿಷೇಧಿತ ಪ್ಲಾಸ್ಟಿಕ್ ಚೀಲಗಳನ್ನು ನಗರಸಭೆ ಅಧಿಕಾರಿಗಳು ವಶಪಡಿಸಿಕೊಂಡರು.

ಈ ಸಂದರ್ಭದಲ್ಲಿ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಆನಂದ್ ಬದಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಾಯಕ ಪರಿಸರ ಅಧಿಕಾರಿ ವಿಕಾಸ್ ಹಾಗೂ ನಗರಸಭೆಯ ಅಧಿಕಾರಿಗಳು ಹಾಜರಿದ್ದರು.

## ಜನರು ಪರಿತಪಿಸಿದರೂ ಕರುಣೆ ತೋರದ ಕೇಂದ್ರ ಸರಕಾರ: ಆರೋಪ

■ ವಿಜಯಸಾಕ್ಷಿ ಸುದ್ದಿ, ಹಾವೇರಿ

ಬರ ಪರಿಹಾರ ಬಿಡುಗಡೆ ವಿಷಯದಲ್ಲಿ ನಮ್ಮ ರಾಜ್ಯಕ್ಕೆ ಅನ್ಯಾಯ ಮಾಡಿದ ಕಾರಣಕ್ಕಾಗಿ ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರಕ್ಕೆ ಛೀಮಾರಿ ಹಾಕಿದೆ. ಇದರಿಂದ ಮುಜುಗುರಕ್ಕೆ ಒಳಗಾಗಿರುವ ಬಿಜೆಪಿ ಜನರ ಎದುರು ಮತ್ತಷ್ಟು ಸುಳ್ಳುಗಳನ್ನೇ ಸೃಷ್ಟಿಸುತ್ತಿದೆ ಎಂದು ಹಾವೇರಿ-ಗದಗ ಲೋಕಸಭೆ ಕ್ಷೇತ್ರ ಕಾಂಗ್ರೆಸ್ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಆರೋಪಿಸಿದರು.

ಹಾವೇರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹತ್ತಿಮತ್ತೂರಿನಲ್ಲಿ ಲೋಕಸಭಾ ಕ್ಷೇತ್ರದ ಚುನಾವಣೆ ಪ್ರಚಾರದ ವೇಳೆ ಅವರು ಮಾತನಾಡಿದರು.

ಕಳೆದ ವರ್ಷ ರಾಜ್ಯದಲ್ಲಿ ತೀವ್ರ ಬರ ಪರಿಸ್ಥಿತಿ ತಲೆದೋರಿತ್ತು. ರೈತರು, ಬಡವರು ಸೇರಿದಂತೆ ರಾಜ್ಯ ಜನತೆ ಪರಿತಪಿಸುತ್ತಿರುವ ಸಂದರ್ಭದಲ್ಲಿಯೂ ರಾಜ್ಯ ಜನತೆಯ ಸಹಾಯಕ್ಕೆ ಬಾರದೇ, ಪರಿಹಾರ ಬಿಡುಗಡೆ ಮಾಡದೇ ಕೇಂದ್ರ ಸರ್ಕಾರ ರಾಜ್ಯಕ್ಕೆ ಅನ್ಯಾಯ ಮಾಡಿದೆ. ಸೂಕ್ತ ಪರಿಹಾರ ಬಿಡುಗಡೆಗೊಳಿಸುವಂತೆ ಹಲವು ಬಾರಿ ಮನವಿ ಸಲ್ಲಿಸಿದರೂ ಕೇಂದ್ರಕ್ಕೆ ಕರುಣೆ ಬರಲಿಲ್ಲ. ಆದ್ದರಿಂದಾಗಿ ರಾಜ್ಯ ಕಾಂಗ್ರೆಸ್ ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ನಡೆಸಿದ ಹೋರಾಟದಿಂದಾಗಿ ಸುಪ್ರಿಂಕೋರ್ಟ್‌ನಲ್ಲಷ್ಟೇ ಅಲ್ಲದೇ ಕರ್ನಾಟಕದ ಜನರ ಎದುರು ಕೇಂದ್ರ ಬಿಜೆಪಿ ಸರ್ಕಾರಕ್ಕೆ ತೀವ್ರ ಮುಖಭಂಗವಾಗಿದೆ. ರಾಜ್ಯಕ್ಕೆ ಬಿಜೆಪಿ ಮಾಡುತ್ತಿರುವ ಅನ್ಯಾಯವನ್ನು ಪ್ರಶ್ನಿಸಿ, ಪ್ರತಿಭಟಿಸಬೇಕಿದೆ. ಲೋಕಸಭೆ ಚುನಾವಣೆಯುಲ್ಲಿ ಬಿಜೆಪಿಗೆ ಸೋಲಿನ ರುಚಿ ತೋರಿಸಬೇಕಿದೆ. ಪ್ರತಿಯೊಬ್ಬರೂ ಜಾಗೃತರಾಗಿ ಕಾಂಗ್ರೆಸ್ ಪಕ್ಷಕ್ಕೆ ಬೆಂಬಲ ನೀಡಿ, ಕೆಲವೇ ಕೆಲವು ಶ್ರೀಮಂತರ ಪರವಾಗಿ ನಿಂತಿರುವ ಬಿಜೆಪಿಗೆ ಪಾಠ ಕಲಿಸಿ ಎಂದು ಜನರಿಗೆ ಗಡ್ಡದೇವರಮಠ ಮನವಿ ಮಾಡಿದರು.

ಇದೇ ಸಂದರ್ಭದಲ್ಲಿ ಹತ್ತಿಮತ್ತೂರನಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪರ ರೋಡ್ ಶೋ ನಡೆಸಲಾಯಿತು. ಶಾಸಕರಾದ ರುದ್ರಪ್ಪ ಲಮಾಣಿ, ಶ್ರೀನಿವಾಸ ಮಾನೆ, ಕೆಸಿಸಿ ಬ್ಯಾಂಕ್ ನಿರ್ದೇಶಕ ಕೊಟ್ರೇಶಪ್ಪ ಬಸೆಗಣ್ಣಿ, ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್. ಗಾಜೀಗೌಡ್ರ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಂ.ಎಂ. ಹಿರೇಮಠ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ಎಂ. ಮೈದೂರ, ಮುಖಂಡರಾದ ಎಸ್.ವಿ. ಪಾಟೀಲ, ಮಾದೇಗೌಡ ಗಾಜಿಗೌಡ್ರ, ಶ್ರೀಧರ ದೊಡ್ಡಮನಿ, ಬಿ.ಎಚ್. ಪಾಟೀಲ, ಡಾ. ವಿನೋದ ಹೊನ್ನಿಕೊಪ್ಪ, ಹಜರೇಸಾಬ ಜೋತಿ, ಮಂಜುನಾಥರಡ್ಡಿ ಮಾಲಿ, ಎ.ಎಂ. ಪಟವೇಗಾರ, ಗಣೇಶ ಪೂಜಾರ, ಬಸವರಾಜ ವಡ್ಡರ, ಚಂದ್ರಶೇಖರ ಹಟ್ಟಿ, ಹೊನ್ನಪ್ಪ ಹಾಲಗಿ, ಶರೀಫಸಾಬ ನದಾಫ್ ಉಪಸ್ಥಿತರಿದ್ದರು.



## KSCST ನಿಧಿಯ ಪ್ರಶಸ್ತಿಗೆ ಪ್ರಾಜೆಕ್ಟ್‌ಗಳ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿ ಪ್ರಾಜೆಕ್ಟ್ ಪ್ರಸ್ತಾಪಗಳಿಗಾಗಿ ಕರ್ನಾಟಕ ಸರ್ಕಾರದಿಂದ ಏಖಅಖಿ ನಿಧಿಯ ಪ್ರಶಸ್ತಿಗೆ 2023-24ರ ಸಾಲಿನಲ್ಲಿ ನಗರದ ತೋಂಟದಾರ್ಯ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳ ಮೂರು ತಂಡಗಳು ಆಯ್ಕೆಯಾಗಿವೆ.

ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ವಿಭಾಗದ ಮಾರ್ಗದರ್ಶಕ ಪ್ರೊ. ಜಗದೀಶ ಶಿವನಗುತ್ತಿ ಅವರ ವಿಶೇಷ ಚೇತನರಿಗಾಗಿ ಧ್ವನಿ ನಿಯಂತ್ರಿತ ವ್ಹೀಲ್ ಚೇರ್, ಪ್ರೊ. ಸಂತೋಷಕುಮಾರ ಜಿ.ಎಂ. ಅವರ ಗ್ರಾಮೀಣ ಜನರಿಗಾಗಿ ಸೌರ ವಿದ್ಯುತ್ ಚಾಲಿತ ರೆಫ್ರಿಜರೇಟರ್ ಮತ್ತು ಮೆಕ್ಯಾನಿಕಲ್ ಇಂಜಿನಿಯರಿಂಗ್ ವಿಭಾಗದ ಪ್ರೊ. ಕೆ.ಹೆಚ್. ಪುಲಿಕೇಶಿ ಅವರ ವೈದ್ಯಕೀಯ ತ್ಯಾಜ್ಯದಿಂದ ಕಂಪೋಸಿಟ್ ಮೆಟೀರಿಯಲ್ ತಯಾರಿಕೆ ಈ ಮೂರೂ ಪ್ರಾಜೆಕ್ಟ್ ಪ್ರಸ್ತಾಪಗಳು ವಿಜ್ಞಾನ ಮತ್ತು ತಂತ್ರಜ್ಞಾನದ ಪ್ರಗತಿಯನ್ನು ಶ್ರೀಮಂತಗೊಳಿಸುವುದು ಮಾತ್ರವಲ್ಲದೆ ನಮ್ಮ ಸಮಾಜದ ಸಾಮಾಜಿಕ-ಆರ್ಥಿಕ ಅಭಿವೃದ್ಧಿಗೆ ಕೊಡುಗೆ ನೀಡುತ್ತವೆ ಎಂದು ಎಲೆಕ್ಟ್ರಿಕಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ. ಈರಣ್ಣ ಕೋರಚಗಾಂವ ತಿಳಿಸಿದ್ದಾರೆ.

ಈ ಯಶಸ್ಸು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸುವುದು ಮಾತ್ರವಲ್ಲದೆ ನಮಗೆಲ್ಲರಿಗೂ ಹೆಮ್ಮೆ ತಂದಿದೆ ಎಂದು ಕಾಲೇಜಿನ ಪ್ರಾಂಶುಪಾಲ ಡಾ. ಎಂ.ಎಂ. ಅವಟಿ ಮತ್ತು ಕಾಲೇಜಿನ ಆಡಳಿತ ಮಂಡಳಿ ಹರ್ಷ ವ್ಯಕ್ತಪಡಿಸಿದ್ದಾರೆ.

### ಆರೋಗ್ಯವಂತ ಸಮಾಜ ನಿರ್ಮಾಣದ ಕಾಳಜಿ ಹೊಂದಿದ ಶ್ರೀ ದಿಂಗಾಲೇಶ್ವರ ಮಠ

# ಬಾಲೇಹೊಸೂರ ಮಠದ ಜಾತ್ರಾ ಮಹೋತ್ಸವ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಬಾಲೆಹೊಸೂರ ಗ್ರಾಮದ ಶ್ರೀ ದಿಂಗಾಲೇಶ್ವರ ಮಠದ ಜಾತ್ರಾ ಮಹೋತ್ಸವ ಏ.28 ಮತ್ತು 29 ರಂದು ಜರುಗಲಿದೆ.

ಏ.28ರ ಪ್ರಾತಃಕಾಲ ಶ್ರೀ ಗುರು ದಿಂಗಾಲೇಶ್ವರರ ಕರ್ತೃ ಗದ್ದುಗೆಗೆ ಮಹಾರುದ್ರಾಭಿಷೇಕ, ಷಟಸ್ಥಲ ಧ್ವಜಾರೋಹಣ, ಧಾರ್ಮಿಕ ಕಾರ್ಯಕ್ರಮ ನೆರವೇರಲಿದೆ. ಸಂಜೆ 5ಕ್ಕೆ ಮಹಾರಥೋತ್ಸವ ಜರುಗುವುದು. ಏ.29ರ ಸಂಜೆ 5ಕ್ಕೆ ಕಡುಬಿನ ಕಾಳಗ ಜರುಗುವುದು. ಭಕ್ತರು ಜಾತ್ರಾಮಹೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಬೇಕು ಎಂದು ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ತಿಳಿಸಿದ್ದಾರೆ.

ಬಾಲೇಹೊಸೂರ ಮಠದ ಕಿರು ಪರಿಚಯ: ಗದಗ ಜಿಲ್ಲೆಯ ಶಿರಹಟ್ಟಿ ತಾಲೂಕಿನ ಬಾಲೇಹೊಸೂರ ಗ್ರಾಮದ ಶ್ರೀ ದಿಂಗಾಲೇಶ್ವರ ಮಠವು 300 ವರ್ಷಗಳಷ್ಟು ಪುರಾತನ ಇತಿಹಾಸ ಹೊಂದಿದೆ. ಈ ಮಠದ ಲಿಂ.ಶ್ರೀಗಳೆಲ್ಲರೂ



ಸಮಾಜಮುಖಿ ಮತ್ತು ಧಾರ್ಮಿಕ ಕಾರ್ಯಕ್ಕಾಗಿ ಸಮರ್ಪಿಸಿಕೊಂಡವರಾಗಿದ್ದರು. ಕಳೆದ 3 ದಶಕಗಳ ಹಿಂದೆ ಶ್ರೀಮಠದ 6ನೇ ಪಟ್ಟಾಧ್ಯಕ್ಷರು, ಸದ್ಯ ಶಿರಹಟ್ಟಿ ಫಕೀರೇಶ್ವರಮಠದ ಉತ್ತರಾಧಿಕಾರಿಗಳಾದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ತಮ್ಮ ಪಾಂಡಿತ್ಯ, ಪ್ರವಚನದ ಪ್ರಖರತೆ ಮತ್ತು ಶ್ರೀಮಠದ ಅಭಿವೃದ್ಧಿಗಾಗಿ ಹಾಗೂ ಧರ್ಮ ಯುದ್ಧಕ್ಕಾಗಿ ಶ್ರಮಿಸುವ ಮೂಲಕ ಬಾಲೆಹೊಸೂರ ಮಠವನ್ನು ನಾಡಿನಾದ್ಯಂತ ಗುರುತಿಸುವ ಮಹೋನ್ನತ ಕಾರ್ಯ ಮಾಡಿದ್ದಾರೆ.

ಫಕೀರ ದಿಂಗಾಲೇಶ್ವರ ಶ್ರೀಗಳು ತಮ್ಮ ಪ್ರವಚನದ ಮೂಲಕ ನಾಡಿನ ಜನ ಮಾನಸದಲ್ಲಿ ಮನೆ ಮಾಡಿದ್ದಾರೆ. 'ಸದ್ಗುಣಗಳ ದೀಕ್ಷೆ-ದುಶ್ಚಟಗಳ ದೀಕ್ಷೆ ಕಾರ್ಯಕ್ರಮದ ಮೂಲಕ ಆರೋಗ್ಯವಂತ ಸಮಾಜ ನಿರ್ಮಾಣದ ಕಾಳಜಿ ಅವರದ್ದಾಗಿದೆ. ಪರಿಸರ ಪ್ರೇಮಿಗಳಾದ ಶ್ರೀಗಳು, ಮಠದ ಕಾರ್ಯಕ್ರಮದಲ್ಲಿ 5001 ಮಾತೆಯರಿಗೆ



1 ತೆಂಗು, 1 ಮಾವಿನ ಸಸಿಗಳನ್ನು ಉಡಿ ತುಂಬಿ ವನಸಿರಿ ಬೆಳೆಸುವಂತೆ ಪ್ರೋತ್ಸಾಹಿಸುವ ಕಾರ್ಯ ಮಾಡಿದ್ದು ಅವರ ಪರಿಸರ ಕಾಳಜಿಗೆ ಸಾಕ್ಷಿಯಾಗಿದೆ. ಕೆರೆಗೆ ನದಿ ನೀರು ಹರಿಸಲು ಹೋರಾಟ, ಕೆರೆ ಹೂಳೆತ್ತುವ ಕಾರ್ಯ ಮಾಡಿದ್ದಾರೆ. ಸದಾ ಓದುವ ಹಂಬಲ ಹೊಂದಿರುವ ಇವರು ತಮ್ಮದೇ ಆದ ಗ್ರಂಥಾಲಯ ಹೊಂದಿದ್ದು, ಅಲ್ಲಿ ಅತ್ಯಂತ ಶ್ರೇಷ್ಠವಾದ ಸಾವಿರಾರು ಗ್ರಂಥಗಳಿವೆ. ಇದೀಗ

ಗ್ರಾಮೀಣ ಭಾಗದ ಶ್ರೀಮಠಕ್ಕೆ ತಮ್ಮ ಪ್ರಾಮಾಣಿಕ ಸೇವೆಯ ಮೂಲಕ ಅಮೃತ ಶಿಲೆಯ ಭವ್ಯ ಮಠ, ದಾಸೋಹ ಭವನ, ಯಾತ್ರಿ ನಿವಾಸ, ಶಾಲೆ, ಗೋಶಾಲೆ, ಸಮುದಾಯ ಭವನ, ಸುಂದರ ಸಮೃದ್ಧ ತೋಟ ನಿರ್ಮಿಸಿ ಸಮಾಜಕ್ಕೆ ಸಮರ್ಪಿಸಿದ್ದಾರೆ. 'ಮಠ ಕಟ್ಟುವುದು ಭಕ್ತರ ಕೆಲಸ, ಸಮಾಜ ಕಟ್ಟುವುದು, ಧರ್ಮ ಕಾಪಾಡುವುದು ಸ್ವಾಮಿಗಳ ಕೆಲಸ' ಎಂದು ಹೇಳುವ ಶ್ರೀಗಳು ಭಕ್ತರು ನೀಡುವ ಕಾಣಿಕೆ ಸತ್ಕಾರ್ಯಕ್ಕೆ ಸಲ್ಲಬೇಕೆಂಬ ಉದ್ದೇಶ ಸಾಕಾರಗೊಳಿಸಿದ್ದಾರೆ. ಶ್ರೀಮಠವಿಂದು ನಾಡಿನೆಲ್ಲೆಡೆ ಹೆಸರಾಗಿದೆ.

ಕಳೆದ ಒಂದು ವರ್ಷದಿಂದ ಶಿರಹಟ್ಟಿ ಸಂಸ್ಥಾನದ ಮಠದ ಉತ್ತರಾಧಿಕಾರಿಗಳಾಗಿ ಧರ್ಮ ಜನಜಾಗೃತಿ, ಶಿಕ್ಷಣ ಸೇವೆ, ಸಾಮಾಜಿಕ ಬದಲಾವಣೆಗಾಗಿ ತಮ್ಮನ್ನೇ ಸಮರ್ಪಿಸಿಕೊಂಡಿರುವ ಫಕೀರ ದಿಂಗಾಲೇಶ್ವರ ಶ್ರೀಗಳು ಈ ನೆಲದ ನಾಡಿನ ಭಕ್ತರ ಮನೆ ಮಾತಾಗಿದ್ದಾರೆ.

### ತೋಂಟದಾರ್ಯ ಮಠದ ಲಘು ರಥೋತ್ಸವದ ವೇದಿಕೆ ಕಾರ್ಯಕ್ರಮದಲ್ಲಿ ಡಾ.ಮಹಾಂತ ಮಹಾಸ್ವಾಮಿಗಳು

# ಲಿಂಗೈಕ್ಯ ಗುರುಗಳ ಅಧ್ಯಯನಶೀಲತೆ ಅನನ್ಯ



■ ವಿಜಯಸಾಕ್ಷಿ ಸುದ್ದಿ, ಗದಗ

ಅನ್ನ, ಅಕ್ಷರ, ದಾಸೋಹಕ್ಕೆ ನಾಡಿನಲ್ಲಿ ಪ್ರಸಿದ್ಧವಾಗಿರುವ ತೋಂಟದಾರ್ಯ ಮಠವು ಸಮಾಜಕ್ಕೆ ಕೊಡುಗೆ ನೀಡಿ ತೆರೆಮರೆಯಲ್ಲಿರುವ ಸಾಧಕರನ್ನು ಗುರುತಿಸಿ ಗೌರವಿಸುವುದಕ್ಕೆ ಹೆಸರುವಾಸಿಯಾಗಿದೆ ಎಂದು ಜಡೆ ಸಂಸ್ಥಾನಮಠದ ಪೂಜ್ಯ ಡಾ. ಮಹಾಂತ ಮಹಾಸ್ವಾಮಿಗಳು ನುಡಿದರು.

ಅವರು ಬುಧವಾರ ನಗರದ ತೋಂಟದಾರ್ಯ ಮಠದ 2024ನೇ ಸಾಲಿನ ಜಾತ್ರಾ ಮಹೋತ್ಸವದ ಲಘುರಥೋತ್ಸವ ಕಾರ್ಯಕ್ರಮದಲ್ಲಿ ಗೌರವ ಸಂಮಾನ ಸ್ವೀಕರಿಸಿ ಮಾತನಾಡಿದರು.

ಲಿಂಗೈಕ್ಯ ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ನನಗೆ ಮಾರ್ಗದರ್ಶಕರಾಗಿದ್ದರು. ನಾನು ಪೀಠಾಧಿಕಾರ ವಹಿಸಿಕೊಂಡ ದಿನದಂದು ಜಡೆ ಸಂಸ್ಥಾನಮಠದ ಸಂಪೂರ್ಣ ಇತಿಹಾಸವುಳ್ಳ ಪುಸ್ತಕವೊಂದನ್ನು ನನಗೆ ನೀಡಿ ಅಧ್ಯಯನ ಮಾಡುವಂತೆ ತಿಳಿಸಿದ್ದರು. ಲಿಂಗೈಕ್ಯ ಗುರುಗಳ ಅಧ್ಯಯನಶೀಲತೆ ಹಾಗೂ ಸಾಮಾಜಿಕ ಕಾಳಜಿ ನಮಗೆಲ್ಲರಿಗೂ ಸದಾಕಾಲ ಪ್ರೇರಣೆಯಾಗಿರುತ್ತದೆ ಎಂದರು.

ದೆಹಲಿ ಜಾಟವಾ ಸಮುದಾಯದ ಶ್ರೀಮಠದ ಭಕ್ತರು ಹಾಗೂ ಕಾರ್ಪೋರೇಶನ್ ಅಧಿಕಾರಿಗಳಾದ ರವೀಂದ್ರ ಪ್ರಧಾನ್ ಮಾತನಾಡಿ, ಜಾಟವಾ ಜನಾಂಗ ಮತ್ತು ತೋಂಟದಾರ್ಯ ಮಠಕ್ಕೂ ಇರುವ ಬಾಂಧವ್ಯವವನ್ನು ನೆನೆದರು. ಬೆಳಗಾವಿಯ ಪ್ರೊ.ಶಾಲಿನಿ ದೊಡಮನಿ ರಚಿಸಿದ 'ಕರ್ನಾಟಕದ ಗಾಂಧಿ' ಹರ್ಡೇಕರ ಮಂಜಪ್ಪನವರು ಗ್ರಂಥದ ಹಿಂದಿ ಆವೃತ್ತಿಯನ್ನು ಲೋಕಾರ್ಪಣೆಗೊಳಿಸಲಾಯಿತು.

ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಡಾ.ಪ್ರಭು ಮಹಾಸ್ವಾಮಿಗಳು ವಿರಕ್ತಮಠ ಸಂಡೂರ, ಆಲಮೇಲ ವಿರಕ್ತಮಠದ ಜಗದೇವ ಮಲ್ಲಿಬೊಮ್ಮಯ್ಯ ಮಹಾಸ್ವಾಮಿಗಳು, ಕಲಬುರ್ಗಿ ರೋಜಾ ಹಿರೇಮಠದ ಕೆಂಚಬಸವ ಶಿವಾಚಾರ್ಯಸ್ವಾಮಿಗಳು, ರಟಕಲ್ ಹಿರೇಮಠದ ರೇವಣಸಿದ್ಧ ಶಿವಾಚಾರ್ಯಸ್ವಾಮಿಗಳು, ಡಾ.ಮಹಾಂತಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಡಾ.ಅಶೋಕ ಹುಗ್ಗಣ್ಣವರ ವಚನ ಸಂಗೀತ ನೀಡಿದರು. ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಪ್ರೊ.ಕೆ.ಎಚ್ ಬೇಲೂರ ಸ್ವಾಗತಿಸಿದರು. ವೇದಿಕೆ ಮೇಲೆ ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟರ ಮುಂತಾದವರಿದ್ದರು.

ಜಾತ್ರಾ ಸಮಿತಿ ಉಪಾಧ್ಯಕ್ಷ ಅಮರೇಶ ಚಾಗಿ, ಶ್ರೀದೇವಿ ಶೆಟ್ಟರ, ಶಿವಯ್ಯ ನಾಲತ್ವಾಡಮಠ, ಕಾರ್ಯದರ್ಶಿ ಪ್ರವೀಣ ವಾರಕರ, ಸಹ ಕಾರ್ಯದರ್ಶಿಗಳಾದ ಗವಿಸಿದ್ಧಪ್ಪ ಗಾಣಿಗೇರ, ಬರಕತ್ ಅಲಿ ಮುಲ್ಲಾ, ಚಂದ್ರಶೇಖರ ಇಟಗಿ, ಸಂಘಟನಾ ಕಾರ್ಯದರ್ಶಿ ತಿಮ್ಮರಡ್ಡಿ ಕೋನರಡ್ಡಿ, ಕೋಶಾಧ್ಯಕ್ಷ ವಿಶ್ವನಾಥ ಹಳ್ಳಿಕೇರಿ, ಸಹ ಕೋಶಾಧ್ಯಕ್ಷ ಅಜಯ ಮುನವಳ್ಳಿ, ಶ್ರೀಮಠದ ವ್ಯವಸ್ಥಾಪಕರಾದ ಎಂ.ಎಸ್. ಅಂಗಡಿ, ಅಮರೇಶ ಅಂಗಡಿ, ಶೇಖಣ್ಣ ಕಳಸಾಪೂರ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು. ವಿವೇಕಾನಂದಗೌಡ ಪಾಟೀಲ ನಿರೂಪಿಸಿದರು.

ಜಡೆ ಸಂಸ್ಥಾನಮಠದ ಕುಮಾರ ಕೆಂಪಿನ ಸಿದ್ಧವೃಷಭೇಂದ್ರ ಮಹಾಸ್ವಾಮಿಗಳು ಮಾತನಾಡಿ, ಕರ್ನಾಟಕ ರಾಜ್ಯ ಇಂದು ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ಧಾರ್ಮಿಕವಾಗಿ ಉನ್ನತ ಮಟ್ಟಕ್ಕೆ ತಲುಪಿದ್ದರೆ ಅದರ ಹಿಂದೆ ಮಠ-ಮಾನ್ಯಗಳ ಕೊಡುಗೆ ಸಾಕಷ್ಟಿದ್ದು, ತೋಂಟದಾರ್ಯ ಮಠ ಈ ಸಾಲಿನಲ್ಲಿ ಅಗ್ರಗಣ್ಯ ಸಾಲಿನಲ್ಲಿ ನಿಲ್ಲುತ್ತದೆ. ಲಿಂಗೈಕ್ಯ ಸಿದ್ಧಲಿಂಗ ಶ್ರೀಗಳು ಹಾಕಿಕೊಟ್ಟ ದಾರಿಯಲ್ಲಿ ನಡೆಯುತ್ತಿರುವ ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಅಪಾರ ವಿದ್ವತ್ತುಳ್ಳ ಅಪರೂಪದ ಯತಿಗಳಾಗಿದ್ದು, ನನಗೆ ಹಾಗೂ ನಮ್ಮ ಹಿರಿಯ ಸ್ವಾಮಿಗಳಿಗೆ ಅವರ ಮಾರ್ಗದರ್ಶನ ಸದಾಕಾಲ ಇರಬೇಕು ಎಂದರು.

### ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಡಾ.ಚಂದ್ರು ಲಮಾಣಿ ಮತ ಯಾಚನೆ

## ಮೋದಿಯವರ ನೇತೃತ್ವ ಇಂದಿನ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತದ ಸುರಕ್ಷತೆ, ಅಖಂಡತೆ ಮತ್ತು ಅಭಿವೃದ್ಧಿಗಾಗಿ ನರೇಂದ್ರ ಮೋದಿಯವರ ನೇತೃತ್ವ ಇಂದಿನ ಅಗತ್ಯವಾಗಿದೆ. ಅದಕ್ಕಾಗಿ ಬರುವ ಲೋಕಸಭೆ ಚುನಾವಣೆಯಲ್ಲಿ ನರೇಂದ್ರ ಮೋದಿ ಮತ್ತೆ ದೇಶದ ಪ್ರಧಾನಮಂತ್ರಿಯಾಗಲು ಬಿಜೆಪಿಗೆ ತಪ್ಪದೇ ಮತಹಾಕಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ವಿನಂತಿಸಿದರು.

ಅವರು ಗುರುವಾರ ಪಟ್ಟಣದ ವಿವಿಧ ವಾರ್ಡ್, ಬೂತ್ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕೇಂದ್ರ ಸರಕಾರದ 10 ವರ್ಷಗಳ ಸಾಧನೆಗಳ ಕರಪತ್ರಗಳನ್ನು ಹಂಚಿ ಹಾವೇರಿ-ಗದಗ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಬಸವರಾಜ ಬೊಮ್ಮಾಯಿ ಪರ ಮತಯಾಚನೆ ಮಾಡಿ ಮಾತನಾಡಿದರು.

ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ರೈತ ವಿದ್ಯಾನಿಧಿ, ಪಿಎಂ ಕಿಸಾನ್‌ನಂತಹ ಮಹತ್ವಾಕಾಂಕ್ಷಿ ಯೋಜನೆಗಳನ್ನು ನಿಲ್ಲಿಸಿದೆ. ಬಿಜೆಪಿ ಪಕ್ಷ ಕೇಂದ್ರದಲ್ಲಿ ಅಧಿಕಾರಕ್ಕೆ ಬಂದ ಮೇಲೆ ದೇಶದ ಪ್ರತಿ ಗ್ರಾಮದಲ್ಲಿ ರಸ್ತೆ, ಕುಡಿಯುವ ನೀರು, ವಿದ್ಯುತ್, ಶೌಚಾಲಯ ಸೇರಿ ಅಗತ್ಯ ಸೌಲಭ್ಯಗಳನ್ನು ಕಲ್ಪಿಸಿದೆ. 25 ಕೋಟಿ ಜನರನ್ನು ಬಡತನದಿಂದ ಮುಕ್ತಗೊಳಿಸಿರುವುದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ಸಾಧನೆಗಳಾಗಿವೆ. ಭಾರತ ವಿಶ್ವಗುರುವಾಗಬೇಕು ಅಂದರೆ ನರೇಂದ್ರ ಮೋದಿ ಮತ್ತೊಮ್ಮೆ ದೇಶದ ಪ್ರಧಾನಿ ಆಗಬೇಕು. ದೇಶದ ಉದ್ಧಾರಕ್ಕಾಗಿ ಬಿಜೆಪಿಯನ್ನು ಗೆಲ್ಲಿಸಬೇಕು ಎಂದು ಹೇಳಿದರು.

ಶಿರಹಟ್ಟಿ ಮಂಡಲದ ಬಿಜೆಪಿ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ನಗರ ಘಟಕ ಅಧ್ಯಕ್ಷ ನವೀನ ಬೆಳ್ಳಟ್ಟಿ ಮಾತನಾಡಿದರು.

ಜೆಡಿಎಸ್ ತಾಲೂಕಾಧ್ಯಕ್ಷ ಪ್ರವೀಣ ಬಾಳಿಕಾಯಿ, ಬಸವರಾಜ ಚಕ್ರಸಾಲಿ, ನಿಂಗಪ್ಪ ಬನ್ನಿ, ಅಶೋಕ ನಿರಾಲೋಟ, ದುಂಡೇಶ ಕೊಟಗಿ, ರಾಮು ಪೂಜಾರ, ಗಿರೀಶ ಚೌರಡ್ಡಿ, ವಸಂತ ಪಾಟೀಲ, ವಿಜಯ ಕುಂಬಾರ, ಮಲ್ಲಿಕಾರ್ಜುನ ನಿರಾಲೋಟ, ಪ್ರಶಾಂತ ಮಲ್ಲೆಪ್ಪನವರ, ಉಳವೇಶಗೌಡ ಪಾಟೀಲ, ತಿರಕಪ್ಪ ಯಲಗಚ್ಚ, ರಾಘು ಕ್ಷತ್ರಿಯ, ಮಾಂತೇಶ ಪೂಜಾರ ಸೇರಿ ಬಿಜೆಪಿಯ ಅನೇಕ ಕಾರ್ಯಕರ್ತರು ಇದ್ದರು.



### ಬಸವರಾಜ ಹೊರಟ್ಟಿಯವರ ಕುರಿತಾದ ಗ್ರಂಥಗಳ ಲೋಕಾರ್ಪಣೆ

# ಸಿದ್ಧಲಿಂಗ ಶ್ರೀಗಳು ಚಿರಸ್ಥಾಯಿಯಾಗಿದ್ದಾರೆ

■ ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ನನ್ನ ಕಾರ್ಯಗಳಿಗೆ ಪ್ರೇರಣೆಯಾಗಿದ್ದರು. ಈ ರಾಜ್ಯದಲ್ಲಿ ಜಾತ್ಯಾತೀತ ಪರಂಪರೆಯನ್ನು ಹೆಮ್ಮರವಾಗಿ ಬೆಳೆಸಿದ ಕೀರ್ತಿ ಸಿದ್ಧಲಿಂಗ ಶ್ರೀಗಳಿಗೆ ಸಲ್ಲುತ್ತದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ನುಡಿದರು.

ಅವರು ನಗರದ ತೋಂಟದಾರ್ಯ ಮಠದ ಜಾತ್ರಾ ಮಹಾರಥೋತ್ಸವದ ನಂತರ ಜರುಗಿದ ವೇದಿಕೆ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಿ ಮಾತನಾಡಿದರು.



ಅನೇಕ ಜನರು ಬದುಕಿದರೂ ಸತ್ತಂತಿರುತ್ತಾರೆ. ಆದರೆ ಕೆಲವೇ ಮಹಾತ್ಮರು ಸಿದ್ಧಲಿಂಗ ಮಹಾಸ್ವಾಮಿಗಳಂತೆ ಅಗಲಿಕೆಯ ನಂತರವೂ ತಮ್ಮ ಕೈಂಕರ್ಯಗಳ ಮೂಲಕ ಚಿರಸ್ಥಾಯಿಯಾಗಿರುತ್ತಾರೆ. ನನ್ನ ನಾಲ್ಕು ದಶಕಗಳ ಸಾರ್ವಜನಿಕ ಜೀವನದಲ್ಲಿ ಸಹಾಯ ಕೇಳಿಕೊಂಡು ಬಂದ ಅಸಂಖ್ಯ ಜನರಿಗೆ ನನ್ನ ಕೈಲಾದಷ್ಟು ಸಹಾಯ ಮಾಡಿದ್ದೇನೆ. ದೇವರು ಹಾಗೂ ನನ್ನ ಶಿಕ್ಷಕ ಸಮೂಹ ಕೊಟ್ಟ ಅಧಿಕಾರವನ್ನು ಜನಸೇವೆಗೆ ಬಳಸಿದ್ದೇನೆ. ನನ್ನನ್ನು ಸತತವಾಗಿ ಎಂಟು ಬಾರಿ ವಿಧಾನ ಪರಿಷತ್ತಿಗೆ ಆರಿಸಿ ಕಳುಹಿಸಿದ ಶಿಕ್ಷಕ ಸಮೂಹಕ್ಕೆ ಚ್ಯುತಿ ಬಾರದಂತೆ ಕೆಲಸ ಮಾಡಿದ ತೃಪ್ತಿ ನನಗಿದೆ ಎಂದರು.

ಡಾ.ಎಂ.ಎಂ ಕಲಬುರ್ಗಿ ಅಧ್ಯಯನ ಸಂಸ್ಥೆಯಿಂದ ಪ್ರಕಟಗೊಂಡ ಬಸವರಾಜ ಹೊರಟ್ಟಿಯವರ ಅಭಿನಂದನ ಗ್ರಂಥಗಳಾದ 'ಮೈಲುಗಲ್ಲುಗಳೇ ಮಾತನಾಡುತ್ತವೆ' ಹಾಗೂ 'ದಿಟ್ಟ ಹೆಜ್ಜೆ' ಗ್ರಂಥಗಳು ಲೋಕಾರ್ಪಣೆಗೊಂಡವು.

'ಮೈಲುಗಲ್ಲುಗಳೇ ಮಾತನಾಡುತ್ತವೆ' ಗ್ರಂಥದ ಸಂಪಾದಕ ಡಾ.ಸಂಗಮನಾಥ ಲೋಕಾಪೂರ ಮಾತನಾಡಿ, ಶಿಕ್ಷಕರ ಸುಪುತ್ರರಾಗಿ, ಸ್ವತಃ ಶಿಕ್ಷಕರಾಗಿ ಹಾಗೂ ಶಿಕ್ಷಕರ ಪ್ರತಿನಿಧಿಯಾಗಿ ಸತತ ಎಂಟು ಬಾರಿ ವಿಧಾನ ಪರಿಷತ್ತಿಗೆ ಆಯ್ಕೆಯಾಗಿ ದಾಖಲೆ ನಿರ್ಮಿಸಿದ ಬಸವರಾಜ ಹೊರಟ್ಟಿಯವರು ಮೌಲ್ಯಾಧಾರಿತ ರಾಜಕಾರಣಕ್ಕೆ ಹೆಸರಾಗಿದ್ದಾರೆ. ಆತ್ಮಪ್ರಶಂಸೆ ಮಾಡಿಕೊಳ್ಳುವ ಗುಣ ಅವರಲ್ಲಿ ಇಲ್ಲವಾದ್ದರಿಂದ ಹೊರಟ್ಟಿಯವರು ಮಾಡಿದ ಪರೋಪಕಾರಗಳು ದಾಖಲೆಯಾಗಿ ಉಳಿಯಲಿ ಎನ್ನುವ ಕಾರಣಕ್ಕೆ ಅವರ ಅಭಿಮಾನಿಗಳು ನಾವು ಸೇರಿಕೊಂಡು 'ಮೈಲುಗಲ್ಲುಗಳೇ ಮಾತನಾಡುತ್ತವೆ' ಎಂಬ ಗ್ರಂಥ ತಯಾರು ಮಾಡಿದೆವು ಎಂದರು.

ಸಿದ್ಧಯ್ಯನಕೋಟೆಯ ವಿಜಯಮಹಾಂತ ಶಾಖಾಮಠದ ಪೂಜ್ಯ ಶ್ರೀ ಬಸವಲಿಂಗ ಮಹಾಸ್ವಾಮಿಗಳನ್ನು ಪೀಠಾರೋಹಣದ ನಿಮಿತ್ಯ ಸಂಮಾನಿಸಲಾಯಿತು. ಪಂ.ಕುಮಾರ ಮರಡೂರ ಅವರಿಂದ ವಚನ ಸಂಗೀತ, ನಾಗರತ್ನ ಹಡಗಲಿ ಋತಿಕಾ ನೃತ್ಯ ನಿಕೇತನ ತಂಡದವರಿಂದ ವಚನ ನೃತ್ಯರೂಪಕ ಜರುಗಿ-ತು.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ವಹಿಸಿದ್ದರು. ಜಗದ್ಗುರು ಡಾ. ಸಾರಂಗಧರ ದೇಶಿಕೇಂದ್ರ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಸೊನ್ನ ವಿರಕ್ತಮಠದ ಡಾ. ಶಿವಾನಂದ ಮಹಾಸ್ವಾಮಿಗಳು ಸಮ್ಮುಖ ವಹಿಸಿದ್ದರು.

ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಪ್ರೊ. ಕೆ.ಎಚ್. ಬೇಲೂರ ಸ್ವಾಗತಿಸಿದರು. ವೇದಿಕೆ ಮೇಲೆ ಮಾಜಿ ಸಚಿವರಾದ ಎಸ್.ಎಸ್. ಪಾಟೀಲ, ತೋಂಟದಾರ್ಯ ವಿದ್ಯಾಪೀಠದ ಆಡಳಿತಾಧಿಕಾರಿ ಪ್ರೊ.ಎಸ್.ಎಸ್. ಪಟ್ಟಣಶೆಟ್ಟರ, ಡಾ.ಬಸವರಾಜ ಧಾರವಾಡ ಮುಂತಾದವರಿದ್ದರು.

ಜಾತ್ರಾ ಸಮಿತಿ ಉಪಾಧ್ಯಕ್ಷ ಅಮರೇಶ ಚಾಗಿ, ಶ್ರೀದೇವಿ ಶೆಟ್ಟರ, ಶಿವಯ್ಯ ನಾಲತ್ವಾಡಮಠ, ಕಾರ್ಯದರ್ಶಿ ಪ್ರವೀಣ ವಾರಕರ, ಸಹ ಕಾರ್ಯದರ್ಶಿ ಗವಿಸಿದ್ಧಪ್ಪ ಗಾಣಿಗೇರ, ಬರಕತ್ ಅಲಿ ಮುಲ್ಲಾ, ಚಂದ್ರಶೇಖರ ಇಟಗಿ, ಸಂಘಟನಾ ಕಾರ್ಯದರ್ಶಿ ತಿಮ್ಮರಡ್ಡಿ ಕೋನರಡ್ಡಿ, ಕೋಶಾಧ್ಯಕ್ಷ ವಿಶ್ವನಾಥ ಹಳ್ಳಿಕೇರಿ, ಸಹ ಕೋಶಾಧ್ಯಕ್ಷ ಅಜಯ ಮುನವಳ್ಳಿ, ಶ್ರೀಮಠದ ವ್ಯವಸ್ಥಾಪಕರಾದ ಎಂ.ಎಸ್ ಅಂಗಡಿ, ಅಮರೇಶ ಅಂಗಡಿ, ಶೇಖಣ್ಣ ಕಳಸಾಪೂರ ಸೇರಿದಂತೆ ಶ್ರೀಮಠದ ಸದ್ಭಕ್ತರು ಉಪಸ್ಥಿತರಿದ್ದರು.

ಅತಿಥಿಗಳಾಗಿ ಭಾಗವಹಿಸಿದ್ದ ಮಾಜಿ ಶಾಸಕರಾದ ಡಿ.ಆರ್. ಪಾಟೀಲ ಮಾತನಾಡಿ, ಹೊರಟ್ಟಿಯವರ ಸೇವಾಕಾರ್ಯಗಳನ್ನು ನಾನು ಹತ್ತಿರದಿಂದ ನೋಡಿದ್ದೇನೆ. ಶಿಕ್ಷಕರೇ ಅವರ ಶ್ರೀರಕ್ಷೆಯಾಗಿದ್ದು, ಅವರ ಹಿತಕ್ಕಾಗಿ ಅನೇಕ ಸರ್ಕಾರಿ ನೀತಿ-ನಿಯಮಗಳನ್ನು ಪಟ್ಟು ಹಿಡಿದು ಹೊರಟ್ಟಿಯವರು ಪರಿಷ್ಕರಿಸಿದ್ದಾರೆ. ಹೊರಟ್ಟಿಯವರಂತೆ ಕಟಿಬದ್ಧರಾಗಿ ಕೆಲಸ ಮಾಡುವ ಮನೋಭಾವ ಇಂದಿನ ಶಾಸಕರಿಗೆ ಅವಶ್ಯವಿದ್ದು, ಇದಕ್ಕಾಗಿ ಹೊರಟ್ಟಿಯವರ ಕುರಿತು ಬಿಡುಗಡೆಯಾದ ಗ್ರಂಥಗಳನ್ನು ಅವರಿಗೆ ಓದಲು ನೀಡಬೇಕು ಎಂದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka